ಸಂಪುಟ : 10 ಸಂಚಿಕೆ: 85 ಪುಟ : 4+2 ಬೆಲೆ: 3.00 ಶನಿವಾರ ಮೇ 03 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 85 Pages : 4+2 Price : 3.00 Saturday May 03 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




### ಎಸ್‌ಎಸ್‌ಎಲ್‌ಸಿ ಫಲಿತಾಂಶ ಪ್ರಕಟ । ಸತತ 2ನೇ ಬಾರಿಯೂ 17ನೇ ಸ್ಥಾನದಲ್ಲಿ ಉಳಿದ ಗದಗ ಜಿಲ್ಲೆ

# ಮೇಲೇರದಿದ್ದರೂ, ಕೆಳಗಿಳಿಯದ ಎಸ್‌ಎಸ್‌ಎಲ್‌ಸಿ ಫಲಿತಾಂಶ

■ **ವಿಜಯಸಾಕ್ಷಿ ಸುದ್ದಿ, ಗದಗ**

2025ರ ಮಾರ್ಚ್ ತಿಂಗಳಲ್ಲಿ ನಡೆದ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶ ಶುಕ್ರವಾರ ಪ್ರಕಟವಾಗಿದೆ. ಗದಗ ಜಿಲ್ಲೆ ರಾಜ್ಯಮಟ್ಟದಲ್ಲಿ 17ನೇ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿದೆ. 2024ರಲ್ಲಿಯೂ 17ನೇ ಸ್ಥಾನದಲ್ಲಿದ್ದ ಗದಗ ಜಿಲ್ಲೆ ಮುಂಬರುವ ವರ್ಷಗಳಲ್ಲಿ ಇನ್ನೂ ಉತ್ತಮ ಫಲಿತಾಂಶ ಸಾಧಿಸುವ ನಿರೀಕ್ಷೆಯನ್ನು ಉಳಿಸಿಕೊಂಡಿದೆ.

2023ರಲ್ಲಿ 25ನೇ ಸ್ಥಾನದಲ್ಲಿದ್ದ ಗದಗ ಜಿಲ್ಲೆ, 2024ರ ಸಾಲಿನಲ್ಲಿ ಆಶಾದಾಯಕವಾಗಿ 17ನೇ ಸ್ಥಾನಕ್ಕೆ ಏರಿಕೆ ಕಂಡಿತು. ಈ ಬಾರಿಯೂ 17ನೇ ಸ್ಥಾನವನ್ನು ಕಾಪಾಡಿಕೊಂಡಿದೆಯಲ್ಲದೆ, ಕಳೆದೆರಡು ವರ್ಷಗಳಿಂದ ಗದಗ ಜಿಲ್ಲೆಯ ಫಲಿತಾಂಶ ತೃಪ್ತಿಕರವಾಗಿರುವುದು ಶಿಕ್ಷಣ ಪ್ರೇಮಿಗಳಲ್ಲಿ ತುಸು ನೆಮ್ಮದಿ ಮೂಡಿಸಿದೆ.

ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಹಾಜರಾದ 14521 ವಿದ್ಯಾರ್ಥಿಗಳ ಪೈಕಿ 9834 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದು, ಒಟ್ಟಾರೆ ಶೇ. 67.72ರಷ್ಟು ಫಲಿತಾಂಶ ದಾಖಲಾಗಿದೆ. ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ ಶೇಕಡಾವಾರು ಫಲಿತಾಂಶದಲ್ಲಿ ಈ ಬಾರಿ ಶೇ. 7.02ರಷ್ಟು ಕಡಿಮೆಯಾಗಿದ್ದರೂ ರಾಜ್ಯ ರ‍್ಯಾಂಕಿಂಗ್‌ನಲ್ಲಿ ಈ ಸಲವೂ 17ನೇ ಸ್ಥಾನವನ್ನು ಕಾಯ್ದಿರಿಸಿದೆ.

ಗೊಜನೂರ ಮೊರಾರ್ಜಿ ದೇಸಾಯಿ ಶಾಲೆಯ ಉದಯ ಕಟ್ಟೆಣ್ಣವರ, ಸ್ಫೂರ್ತಿ ಮನ್ನಮ್ಮನವರ, ಲಕ್ಷ್ಮೇಶ್ವರದ ಲಿಟಲ್ ಹಾರ್ಟ್ ಇಂಟರ್‌ನ್ಯಾಶನಲ್ ಶಾಲೆಯ ಸುಮೀತಗೌಡ ನರಸಮ್ಮನವರ, ಶಿಗ್ಲಿಯ ಸೋಹಾ ನದಾಫ್, ಮುಂಡರಗಿಯ ಆದರ್ಶ ವಿದ್ಯಾಲಯದ ಕಾವ್ಯ ಉಪ್ಪಾರ ಜಿಲ್ಲೆಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ. ಈ ವಿದ್ಯಾರ್ಥಿಗಳು 625ಕ್ಕೆ 622 ಅಂಕ ಪಡೆದು, ಶೇ. 99.52ರಷ್ಟು ಫಲಿತಾಂಶ ಪಡೆದಿದ್ದಾರೆ.

ಲಕ್ಷ್ಮೇಶ್ವರದ ಎಸ್‌ಟಿಪಿಎಂಬಿ ಶಾಲೆಯ ಜಯಂತ ನವಲಗುಂದ, ಗದಗ ಸೇಂಟ್ ಜಾನ್ ಶಾಲೆಯ ಜಸ್ಸಿಕಾ ಅಪೇಕ್ಷಿತಾ ಜಿಲ್ಲೆಗೆ ತೃತೀಯ ಸ್ಥಾನ (ಕನ್ನಡ ಮಾಧ್ಯಮದಲ್ಲಿ ಜಿಲ್ಲೆಗೆ ಪ್ರಥಮ) ಪಡೆದಿದ್ದಾರೆ. ಈ ಎಲ್ಲ ವಿದ್ಯಾರ್ಥಿಗಳು 625ಕ್ಕೆ 621 ಅಂಕ ಪಡೆದು, ಶೇ. 99.36ರಷ್ಟು ಫಲಿತಾಂಶ ದಾಖಲಿಸಿದ್ದಾರೆ.

ಗದಗ ತೋಂಟದಾರ್ಯ ಶಾಲೆಯ ಸಮರ್ಥ ಮಸ್ತಮರಡಿ 98.88 ಅಂಕ ಪಡೆದು ಕನ್ನಡ ಮಾಧ್ಯಮದಲ್ಲಿ ಜಿಲ್ಲೆಗೆ ದ್ವಿತೀಯ ಹಾಗೂ ಲಕ್ಕುಂಡಿಯ ಬಿ.ಎಚ್. ಪಾಟೀಲ ಸಂಯುಕ್ತ ಪಪೂ ಕಾಲೇಜಿನ ಪ್ರಕಾಶ ಪಾಪನಾಶಿ ಶೇ. 98.24 ಅಂಕ ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ.

ಉರ್ದು ಮಾಧ್ಯಮದಲ್ಲಿ ಲಕ್ಷ್ಮೇಶ್ವರದ ಸರಕಾರಿ ಉರ್ದು ಶಾಲೆಯ ಶಫೀಯಾಬೇಗಂ ಮಲ್ಲಿಕ್ ಶೇ. 96.96 ಅಂಕ ಪಡೆದು ಜಿಲ್ಲೆಗೆ ಪ್ರಥಮ, ಗದಗ ಆಂಗ್ಲೋ ಉರ್ದು ಶಾಲೆಯ ಶಿಫಾ ಖಲೀಫಾ ಹಾಗೂ ಗಜೇಂದ್ರಗಡ ಸರಕಾರಿ ಉರ್ದು ಶಾಲೆಯ ಜೀನತ್ ಕೊಪ್ಪಳ ಶೇ. 92ರಷ್ಟು ಅಂಕ ಪಡೆದು ಜಿಲ್ಲೆಗೆ ದ್ವಿತೀಯ, ಲಕ್ಷ್ಮೇಶ್ವರ ಸರಕಾರಿ ಉರ್ದು ಶಾಲೆಯ ತೌಸಿನ್ ಬಾನು ಬಾಗೋಡಿ ಶೇ. 91.52 ಅಂಕ ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ.



ಜಿಲ್ಲೆಯಲ್ಲಿ 5 ಸರಕಾರಿ, 1 ಅನುದಾನಿತ, 5 ಅನುದಾನ ರಹಿತ ಶಾಲೆಗಳು ಸೇರಿದಂತೆ ಒಟ್ಟು 11 ಶಾಲೆಗಳು ಶೇ. 100ರಷ್ಟು ಫಲಿತಾಂಶ ದಾಖಲಿಸಿವೆ. 4 ಸರಕಾರಿ, 25 ಅನುದಾನಿತ ಮತ್ತು 10 ಅನುದಾನ ರಹಿತ ಸೇರಿದಂತೆ 39 ಶಾಲೆಗಳು ಶೇ. 40ಕ್ಕಿಂತ ಕಡಿಮೆ ಫಲಿತಾಂಶ ದಾಖಲಿಸಿದ್ದು, ಈ ಬಾರಿ 1 ಅನುದಾನಿತ ಹಾಗೂ 2 ಅನುದಾನ ರಹಿತ ಶಾಲೆಗಳು ಶೂನ್ಯ ಸಾಧನೆ ಮಾಡಿವೆ.

**ತಾಲೂಕುವಾರು ಫಲಿತಾಂಶ**

| ತಾಲೂಕು | ಪರೀಕ್ಷೆಗೆ ಕುಳಿತವರು | ಉತ್ತೀರ್ಣರಾದವರು |
|---|---|---|
| ಗದಗ ಶಹರ | 2476 | 1451 |
| ಗದಗ ಗ್ರಾಮೀಣ | 2415 | 1591 |
| ಮುಂಡರಗಿ | 1924 | 1239 |
| ನರಗುಂದ | 1472 | 941 |
| ರೋಣ | 3996 | 2506 |
| ಶಿರಹಟ್ಟಿ | 2638 | 2106 |
| ಒಟ್ಟು | 14521 | 9834 |

ಲಕ್ಷ್ಮೇಶ್ವರದ ಎಸ್‌ಟಿಪಿಎಂಬಿ ಆಂಗ್ಲ ಮಾಧ್ಯಮ ಶಾಲೆಯ ಸಂಪದಾ ಕುಲಕರ್ಣಿ, ಖಾದಿಜಾ ಸೂರಣಗಿ, ಲಕ್ಷ್ಮೇಶ್ವರ ತಾಲೂಕಿನ ಗೊಜನೂರು ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ರಿಹಾನ್ ಶಿರಬಡಗಿ, ಗದಗ ನಗರದ ಮಹಾವೀರ ಜೈನ್ ಶಾಲೆಯ ಮಮ್ತಾಜ್ ಅತ್ತಾರ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಈ ನಾಲ್ವರು ವಿದ್ಯಾರ್ಥಿಗಳು 625ಕ್ಕೆ 623 ಅಂಕಗಳನ್ನು ಪಡೆದು ಶೇ. 99.68ರಷ್ಟು ಫಲಿತಾಂಶ ದಾಖಲಿಸಿದ್ದಾರೆ.

ರಾಜ್ಯಮಟ್ಟದ ಸರಾಸರಿ ಅಂಕಗಳನ್ನು ಗಮನಿಸಿದಾಗ ನಮ್ಮ ಪ್ರಯತ್ನ ಫಲಿಸಿರುವುದು ಸ್ಪಷ್ಟವಾಗುತ್ತದೆ. ಶೈಕ್ಷಣಿಕ ವರ್ಷದ ಆರಂಭದಿಂದ ಸಚಿವ ಎಚ್.ಕೆ. ಪಾಟೀಲ, ಜಿಲ್ಲಾಧಿಕಾರಿಗಳು, ಜಿ.ಪಂ ಸಿಇಒ ಅವರ ವಿಶೇಷ ಮುತುವರ್ಜಿಯಿಂದ ಈ ಸಮಾಧಾನಕರ ಫಲಿತಾಂಶ ಪಡೆಯಲು ಸಾಧ್ಯವಾಗಿದೆ.

ಮುಂಬರುವ ವರ್ಷಗಳಲ್ಲಿ ಇನ್ನಷ್ಟು ಶ್ರಮವಹಿಸಿ ಫಲಿತಾಂಶವನ್ನು ಮೇಲಕ್ಕೆ ಎತ್ತುವ ಪ್ರಯತ್ನಗಳನ್ನು ಮಾಡಲಿದ್ದೇವೆ.

**–ಆರ್.ಎಸ್. ಬುರಡಿ.**
ಡಿಡಿಪಿಐ, ಗದಗ.

## ಇಂದಿನ ನೀರು ಪೂರೈಕೆ ವಿವರ

■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮೇ 3ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 29 – ಮಸೂತಿ ಹಳೆಯ ಲೈನ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 3 – ಕುಂಬಾರ ಓಣಿ, ಬಣ್ಣದ ನಗರ, ರಾಜಾಜಿ ರಸ್ತೆ, ಅಯ್ಯಪ್ಪಜ್ಜನ ಗದ್ದುಗೆ, ಕಬಾಡೆ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ.7 – ಪೆಂಡಾರ ಓಣಿ, ಬಚ್ಚಲಕ್ಕಮ್ಮನ ಗುಡಿ, ಹುಚ್ಚನಗೌಡ್ರ ಓಣಿ, ನಂದರಗಿಯವರ ಲೈನ್, ಪಿಂಡಕೋರ ಅವರ ಲೈನ್, ಮಲ್ಲೇಶಪ್ಪನ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 21, 23 – ದ್ಯಾಮವ್ವನ ಕಟ್ಟಿ, ಉಸಗಿನ ಕಟ್ಟಿ, ಜಂತ್ಲಿಯವರ ಲೈನ್, ಕುಂಬಾರ ಓಣಿ, ಪಡಗದ ಭಾಗ –1,2 , ಶಕ್ತಿಮಾನ, ಬೇವಿನ ಮರದಮ್ಮ, ಹಾಳದಿಬ್ಬ 2 ಭಾಗಗಳು, ವಿಭೂತಿ ಓಣಿ, ಪಲ್ಲೇದವರ ಲೈನ್, ಸಿ ಟಿ ಹಾಲ್ 2 ಭಾಗಗಳು ಉಳಿದ ಕೆಲವು ಭಾಗಗಳು.

ಪ್ರಕಟಣೆ: ತಮಗೆ ನೀರು ಸಾಕಾದಾಗ ಸಾರ್ವಜನಿಕರು ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ.

ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಶಂಕರಾಚಾರ್ಯರ ತತ್ವಗಳನ್ನು ಅಳವಡಿಸಿಕೊಳ್ಳಿ

■ **ವಿಜಯಸಾಕ್ಷಿ ಸುದ್ದಿ, ಗದಗ**


ಶಂಕರಾಚಾರ್ಯರ ತತ್ವ ಆದರ್ಶಗಳನ್ನು ಇಂದಿನ ಯುವ ಜನತೆ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹೇಳಿದರು.

ನಗರದ ಶ್ರೀ ಶಂಕರ ಮಠದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಆದಿ ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿಯನ್ನು ಉದ್ಘಾಟಿಸಿ ಅವರು ಮಾತಾಡಿದರು.

ಆದಿ ಶಂಕರಾಚಾರ್ಯರು ತಮ್ಮ ನಿಶ್ಚಲ ಧರ್ಮಭಾವನೆಯಿಂದ ಭಾರತ ದೇಶದ ಉದ್ದಗಲಕ್ಕೂ ಸಂಚರಿಸಿ, ಹಿಂದೂ ಧರ್ಮದ ತತ್ವವನ್ನು ಜನಮಾನಸದಲ್ಲಿ ಬಿತ್ತಿದರು. ಅವರು 'ಅಹಂ ಬ್ರಹ್ಮಾಸ್ಮಿ' ಎಂಬ ಮಹಾವಾಕ್ಯದ ಮೂಲಕ ಈ ಜಗತ್ತಿನ ಪ್ರತಿ ಜೀವಿಯಲ್ಲೂ ದೈವತ್ವವಿದೆ ಎಂಬ ಸತ್ಯವನ್ನು ಸಾರಿದರು. ಈ ವಾಕ್ಯದ ಅರ್ಥ ಅಹಂಕಾರವಲ್ಲ, ಅದು ಮಾನವೀಯತೆ ಹಾಗೂ ಆತ್ಮಜ್ಞಾನದ ಪರಮೋನ್ನತ ತತ್ವವಾಗಿದೆ ಎಂದು ಹೇಳಿದರು.

ಅವರು ಬೋಧಿಸಿದಂತೆ, ನಾವೆಲ್ಲರೂ ಒಳಗೆ ದೈವತ್ವವನ್ನು ಧರಿಸಿಕೊಂಡವರಾಗಿದ್ದೇವೆ. ಈ ತತ್ವವನ್ನು ಜೀವನದೊಳಗೆ ಅಳವಡಿಸಿಕೊಂಡಾಗ ತತ್ವಪೂರ್ಣವಾದ ದಾರಿಯಲ್ಲಿ ನಾವು ಹೆಜ್ಜೆಹಾಕಲು ಸಾಧ್ಯವಾಗುತ್ತದೆ ಎಂದು ನುಡಿದರು. ಸಂಸ್ಕೃತಿ ಚಿಂತಕ ಡಾ. ಶಶಿಧರ ನರೇಂದ್ರ ಮಾತನಾಡಿ, ಜೀವನದಲ್ಲಿ ಎಲ್ಲರೂ ನಮ್ಮ ವಯಕ್ತಿಕ ಕೆಲಸಗಳಲ್ಲಿ ಮುಳುಗಿ ಹೋಗಿದ್ದೇವೆ. ಇದರ ಹೊರತಾಗಿ ಸನಾತನ ಧರ್ಮದ ಉಳಿವಿಗೆ ನಾವೆಲ್ಲರೂ ಪಣ ತೊಡಬೇಕು. ಪಾಶ್ಚಾತ್ಯರ ಅನುಕರಣೆಯನ್ನು ಕಡಿಮೆ ಮಾಡಬೇಕು. ನಮ್ಮ ದೇಶವು ಎಲ್ಲದರಲ್ಲಿಯೂ ಸಬಲ ಎನ್ನುವುದರ ಬಗ್ಗೆ ಕುರುಹುಗಳನ್ನು ಹೊಂದಿದೆ ಎಂದರು. ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಮಾಜಿ ಶಾಸಕ ಡಿ.ಆರ್. ಪಾಟೀಲ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಸಿ.ಆರ್. ಮುಂಡರಗಿ, ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ. ವೀರಯ್ಯಸ್ವಾಮಿ, ರತ್ನಾಕರ ಭಟ್ಟ, ಶ್ರೀನಿವಾಸ ಹಯಿಲಗೋಳ ಸೇರಿದಂತೆ ಗಣ್ಯರು ಹಾಜರಿದ್ದರು.

ಡಾ. ವೆಂಕಟೇಶ ಕುಲಕರ್ಣಿ ಹಾಗೂ ತಂಡದವರು ಭಕ್ತಿ ಸಂಗೀತ ಪ್ರಸ್ತುತಪಡಿಸಿದರು. ಉಪನ್ಯಾಸಕ ಅನಿಲ ವೈದ್ಯ ಸ್ವಾಗತಿಸಿ ಪ್ರಾಸ್ತವಿಕವಾಗಿ ಮಾತನಾಡಿದರು. ಸುಮನ್ ಪಾಟೀಲ ನಿರೂಪಿಸಿದರು.



ಸಂಸ್ಕೃತಿ ಚಿಂತಕ ಡಾ. ಶಶಿಧರ ನರೇಂದ್ರ ಉಪನ್ಯಾಸ ನೀಡಿ, ಶಂಕರಚಾರ್ಯರು ಅತ್ಯಂತ ಸಣ್ಣ ವಯಸ್ಸಿನಲ್ಲಿ ವೇದ, ಉಪನಿಷತ್, ಪುರಾಣಗಳನ್ನು ಅರಿತುಕೊಂಡು ಹಿಂದು ಧರ್ಮವನ್ನು ಉಳಿಸಬೇಕು, ಎಲ್ಲರಿಗೂ ಅರಿವು ಮೂಡಿಸಬೇಕೆಂದು ಭರತ ಖಂಡವನ್ನು ಕಾಲ್ನಡಿಗೆಯಲ್ಲಿ ಸಂಚರಿಸಿ ಮಠಗಳನ್ನು ಸ್ಥಾಪಿಸಿದರು. ಅಂತಹ ಸ್ಥಳಗಳು ಇಂದಿಗೂ ಜಾಗೃತ ಕೇಂದ್ರಗಳಾಗಿವೆ ಎಂದರು.

## ಬ್ರಿಡ್ಜ್ ನಿರ್ಮಾಣ ಕಾಮಗಾರಿ ಶೀಘ್ರವೇ ಆರಂಭ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಉಂಡೇನಹಳ್ಳಿ ಗ್ರಾಮದ ಬಳಿ ಸೂರಣಗಿ ರಸ್ತೆ ಹಾಗೂ ಬಾಲೇಹೊಸೂರ ರಸ್ತೆಗೆ ಅಡ್ಡಲಾಗಿ ಪಿಡಬ್ಲ್ಯೂಡಿ ಇಲಾಖೆಯಿಂದ 1 ಕೋಟಿ ರೂ ವೆಚ್ಚದಲ್ಲಿ ಬೃಹತ್ ಸಿಡಿ ನಿರ್ಮಾಣ ಕಾಮಗಾರಿಗೆ ಶುಕ್ರವಾರ ಶಾಸಕ ಡಾ. ಚಂದ್ರು ಲಮಾಣಿ ಭೂಮಿಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, ಕ್ಷೇತ್ರ ವ್ಯಾಪ್ತಿಯಲ್ಲಿ ಬಹಳಷ್ಟು ರಸ್ತೆಗಳು, ಸೇತುವೆಗಳು ಹದಗೆಟ್ಟಿವೆ. ಇವುಗಳ ಅಭಿವೃದ್ಧಿಗಾಗಿ ಪಿಡಬ್ಲ್ಯೂಡಿ ಮತ್ತು ಕೆಆರ್‌ಡಿಸಿಎಲ್‌ಗೆ ಹೆಚ್ಚಿನ ಅನುದಾನಕ್ಕೆ ಕ್ರಿಯಾಯೋಜನೆಯೊಂದಿಗೆ ಮನವಿ ಮಾಡಿದ್ದೇನೆ. ಅನುದಾನ ಲಭ್ಯತೆಯ ಆಧಾರದ ಮೇಲೆ ರಸ್ತೆ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಸೂರಣಗಿ ರಸ್ತೆ, ಬ್ರಿಡ್ಜ್ ನಿರ್ಮಾಣ ಕಾಮಗಾರಿಯನ್ನು ಶೀಘ್ರವೇ ಪ್ರಾರಂಭಿಸಲಾಗುವುದು. ಪಿಎಂಜಿಎಸ್‌ವೈ ರಸ್ತೆಗಳ ನಿರ್ವಹಣೆಗೆ ಬಗ್ಗೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಆದಷ್ಟು ಬೇಗ ಕಾಮಗಾರಿಯನ್ನು ಗುಣಮಟ್ಟದೊಂದಿಗೆ ಪೂರ್ಣಗೊಳಿಸಿ ಸಂಚಾರಕ್ಕೆ ಅನಕೂಲ ಕಲ್ಪಿಸಬೇಕು ಎಂದು ಗುತ್ತಿಗೆದಾರರಿಗೆ ಸೂಚಿಸಿದರು.

ಈ ವೇಳೆ ಗ್ರಾ.ಪಂ ಅಧ್ಯಕ್ಷ ಚಂದ್ರು ಈಳಗೇರ, ಸದಸ್ಯರಾದ ನಿಂಗಪ್ಪ ಬಂಕಾಪುರ, ಫಕ್ಕೀರಪ್ಪ ಭರಮಗೌಡ್ರ, ಸಕ್ರಪ್ಪ ಲಮಾಣಿ, ಮಧುಮಾಲತಿ ಈಳಗೇರ, ಮಲ್ಲೇಶಪ್ ಮಣ್ಣಮ್ಮನವರ, ಸಂಜೀವಕುಮಾರ ಪಾಟೀಲ, ಟೋಪಣ್ಣ ಲಮಾಣಿ, ಶಿವಣ್ಣ ಲಮಾಣಿ, ಬಿ.ಪಿ. ಹುಲಕೋಟಿ, ಬಿ.ಎಸ್. ಈಳಗೇರ, ಪುಂಡಲೀಕ ಲಮಾಣಿ, ಬಸವರಾಜ ಚಕ್ರಸಾಲಿ ಸೇರಿದಂತೆ ದೊಡ್ಡೂರ, ಉಂಡೇನಹಳ್ಳಿ, ಸುವರ್ಣಗಿರಿ, ದೊಡ್ಡೂರ ತಾಂಡಾದ ಹಿರಿಯರು ಪಾಲ್ಗೊಂಡಿದ್ದರು.

### ಮಂಗಳೂರಿನಲ್ಲಿ ಸುಹಾಸ್ ಶೆಟ್ಟಿ ಹತ್ಯೆ ಖಂಡಿಸಿ ಜಿಲ್ಲಾ ಬಿಜೆಪಿಯಿಂದ ಪ್ರತಿಭಟನೆ

# ಕಾಂಗ್ರೆಸ್ ತುಷ್ಟೀಕರಣದಿಂದ ಹಿಂದೂಗಳ ಕಗ್ಗೊಲೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಕೊಲೆ ಖಂಡಿಸಿ ನಗರದಲ್ಲಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ನೇತೃತ್ವದಲ್ಲಿ ಬಿಜೆಪಿಯಿಂದ ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನೆಯ ವೇಳೆ ಬಿಜೆಪಿ ಕಾರ್ಯಕರ್ತರು ಟೈರ್‌ಗೆ ಬೆಂಕಿ ಹಚ್ಚಲು ಮುಂದಾದಾಗ ಪೊಲೀಸರು ಕಸಿದುಕೊಂಡಿದ್ದು, ಈ ವೇಳೆ ಪ್ರತಿಭಟನಾಕಾರರು ಹಾಗೂ ಪೊಲೀಸರ ನಡುವೆ ತಳ್ಳಾಟ, ನೂಕಾಟ ನಡೆಯಿತು. ಇದರಿಂದ ಸ್ಥಳದಲ್ಲಿ ಕೆಲಕಾಲ ಉದ್ವಿಗ್ನ ವಾತಾವರಣ ಸೃಷ್ಟಿಯಾಗಿತ್ತು.

ಶುಕ್ರವಾರ ಸಾಯಂಕಾಲ ಗಾಂಧಿ ವೃತ್ತದಲ್ಲಿ ಬಿಜೆಪಿಯಿಂದ ಪ್ರತಿಭಟನೆಗೆ ಕರೆ ನೀಡಲಾಗಿತ್ತು. ಈ ವೇಳೆ ಸಿಎಂ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದ ಪ್ರತಿಭಟನಾಕಾರರು ತಮ್ಮ ಆಕ್ರೋಶ ಹೊರಹಾಕಿದರು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಲೆಲ್ಲ ಹಿಂದೂಗಳ ಹತ್ಯೆ ನಡೆಯುತ್ತದೆ. ಆದರೂ ರಾಜ್ಯ ಸರ್ಕಾರ ಇದುವರೆಗೂ ಕೊಲೆಗಾರರ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ನೈತಿಕ ಹೊಣೆ ಹೊತ್ತು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿ ಮಾನವ ಸರಪಳಿ ನಿರ್ಮಿಸಿ, ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಪಕ್ಷದ ಹಿರಿಯ ಮುಖಂಡರಾದ ಶ್ರೀಪತಿ ಉಡುಪಿ, ಎಂ.ಎಂ ಹಿರೇಮಠ, ನಗರಸಭೆ ಸದಸ್ಯರಾದ ವಿನಾಯಕ ಮಾನ್ವಿ, ರಾಘವೇಂದ್ರ ಯಳವತ್ತಿ, ಅನಿಲ ಅಬ್ಬಿಗೇರಿ, ದೇವೇಂದ್ರಪ್ಪ ಹೂಗಾರ, ಉಮೇಶ್ ಹಡಪದ, ಮಂಜುನಾಥ ಮುಳುಗುಂದ, ಸುಧೀರ್ ಕಾಟೀಗರ, ವಿಜಯಲಕ್ಷ್ಮೀ ಮಾನ್ವಿ, ನಾಗರಾಜ ಕುಲಕರ್ಣಿ, ಪ್ರಕಾಶ್ ಅಂಗಡಿ, ರಾಘವೇಂದ್ರ ಹಬೀಬ ಮುಂತಾದವರು ಉಪಸ್ಥಿತರಿದ್ದರು.



ಸುಹಾಸ್ ಶೆಟ್ಟಿ ಕೊಲೆ ಆರೋಪಿಗಳನ್ನು ಸರ್ಕಾರ ಕೂಡಲೇ ಬಂಧಿಸಬೇಕು. ಜೊತೆ–ಗೆ, ಅವರಿಗೆ ಉಗ್ರ ಶಿಕ್ಷೆ ವಿಧಿಸಬೇಕು. ಕಾಂಗ್ರೆಸ್ ಸರ್ಕಾರ ಮುಸ್ಲಿಂ ತುಷ್ಟೀಕರಣಕ್ಕಾಗಿ ಹಿಂದೂ ಧರ್ಮವನ್ನು ಕೊಲೆ ಮಾಡಲು ಹೊರಟಿದೆ. ಇಂತಹ ಮುಖ್ಯಮಂತ್ರಿಯನ್ನು ಕರ್ನಾಟಕ ರಾಜ್ಯ ಹಿಂದೆ–ಂದೂ ಕಂಡಿರಲಿಲ್ಲ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಹಿಂದೂಗಳಿಗೆ ರಕ್ಷಣೆ ಇಲ್ಲದಂತಾಗಿದೆ. ರಾಜ್ಯ ಸರ್ಕಾರ ಅತಿಯಾದ ಓಲೈಕೆಯಲ್ಲಿ ತೊಡಗಿದ್ದು, ಪರಿಸ್ಥಿತಿ ಹೀಗೆಯೇ ಮುಂದುವರೆದರೆ ಮುಂದಿನ ದಿನಮಾನಗಳಲ್ಲಿ ರಾಜ್ಯದ ಜನತೆ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸುತ್ತಾರೆ.

**– ರಾಜು ಕುರುಡಗಿ.**
ಬಿಜೆಪಿ ಜಿಲ್ಲಾಧ್ಯಕ್ಷ.

## ಸಂಪಾದಕೀಯ

### ನೆರೆಯ ರಾಷ್ಟ್ರದ ಅತ್ಯಂತ ಬೇಜವಾಬ್ದಾರಿ ನಡವಳಿಕೆ

ಇತ್ತೀಚೆಗೆ ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಆಪ್ತ ಕಾರ್ಯದರ್ಶಿಯೊಬ್ಬರು ನೀಡಿದ ಹೇಳಿಕೆ ತೀವ್ರ ವಿವಾದಕ್ಕೆ ಕಾರಣವಾಗಿದೆ. ಭಾರತ ಮತ್ತು ಪಾಕಿಸ್ತಾನದ ನಡುವೆ ಯುದ್ಧ ಸಂಭವಿಸಿದಲ್ಲಿ ಬಾಂಗ್ಲಾದೇಶವು ಭಾರತದ ಏಳು ಈಶಾನ್ಯ ರಾಜ್ಯಗಳನ್ನು ವಶಪಡಿಸಿಕೊಳ್ಳಲಿದೆ ಎಂಬ ಅವರ ಹೇಳಿಕೆಯು ಬಾಲಿಶತನದಿಂದ ಕೂಡಿದ್ದು, ನೆರೆಯ ರಾಷ್ಟ್ರವೊಂದು ತೋರಬೇಕಾದ ವಿವೇಕ ಮತ್ತು ಜವಾಬ್ದಾರಿಯನ್ನು ಮರೆತಂತಿದೆ.

ಇಂತಹ ಪ್ರಚೋದನಕಾರಿ ಹೇಳಿಕೆಗಳು ಕೇವಲ ಉಭಯ ದೇಶಗಳ ನಡುವಿನ ಸಂಬಂಧವನ್ನು ಹದಗೆಡಿಸುವುದಲ್ಲದೆ, ಪ್ರಾದೇಶಿಕ ಶಾಂತಿಗೂ ಭಂಗ ತರುವ ಸಾಧ್ಯತೆಗಳಿವೆ.


ಭಾರತ ಮತ್ತು ಬಾಂಗ್ಲಾದೇಶವು ಐತಿಹಾಸಿಕವಾಗಿ ಉತ್ತಮ ಬಾಂಧವ್ಯವನ್ನು ಹೊಂದಿವೆ. ಸ್ವಾತಂತ್ರ್ಯ ಹೋರಾಟದಲ್ಲಿ ಭಾರತವು ಬಾಂಗ್ಲಾದೇಶಕ್ಕೆ ನೀಡಿದ ಬೆಂಬಲವನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ. ಉಭಯ ದೇಶಗಳು ಗಡಿ ಹಂಚಿಕೊಂಡಿದ್ದು, ವ್ಯಾಪಾರ, ಸಂಸ್ಕೃತಿ ಮತ್ತು ಜನರ ಸಂಪರ್ಕವು ಗಟ್ಟಿಯಾಗಿದೆ. ಇಂತಹ ಸನ್ನಿವೇಶದಲ್ಲಿ, ಬಾಂಗ್ಲಾದೇಶದ ಅಧಿಕೃತ ಸ್ಥಾನದಲ್ಲಿರುವ ವ್ಯಕ್ತಿಯೊಬ್ಬರು ಇಂತಹ ಬೇಜವಾಬ್ದಾರಿ ಹೇಳಿಕೆ ನೀಡುವುದು ಆಘಾತಕಾರಿ ಮತ್ತು ಖಂಡನೀಯ.

ಮೊದಲನೆಯದಾಗಿ, ಭಾರತದಂತಹ ಬಲಿಷ್ಠ ರಾಷ್ಟ್ರದ ಏಳು ರಾಜ್ಯಗಳನ್ನು ವಶಪಡಿಸಿಕೊಳ್ಳುವ ಯೋಚನೆಯೇ ಹಾಸ್ಯಾಸ್ಪದವಾಗಿದೆ. ಇದು ಕೇವಲ ವ್ಯಕ್ತಿಯೊಬ್ಬರ ಭ್ರಮೆಯಾಗಿದ್ದು, ವಾಸ್ತವದ ಅರಿವಿಲ್ಲದ ಮಾತುಗಳಾಗಿವೆ. ಎರಡನೆಯದಾಗಿ, ನೆರೆಯ ರಾಷ್ಟ್ರವಾಗಿ ಬಾಂಗ್ಲಾದೇಶವು ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಯನ್ನು ಕಾಪಾಡುವ ನಿಟ್ಟಿನಲ್ಲಿ ಜವಾಬ್ದಾರಿಯುತವಾಗಿ ವರ್ತಿಸಬೇಕಾದುದು ಅತ್ಯಗತ್ಯ. ಇಂತಹ ಉದ್ಧಟತನದ ಹೇಳಿಕೆಗಳು ಉಭಯ ದೇಶಗಳ ನಡುವೆ ಅನಗತ್ಯ ಉದ್ವಿಗ್ನತೆಯನ್ನು ಸೃಷ್ಟಿಸುತ್ತವೆ ಮತ್ತು ಪರಸ್ಪರ ನಂಬಿಕೆಯನ್ನು ಹಾಳುಮಾಡುತ್ತವೆ.

ಸಮಾಧಾನದ ವಿಷಯವೆಂದರೆ, ಬಾಂಗ್ಲಾದೇಶದ ಮಧ್ಯಂತರ ಸರ್ಕಾರವು ತಕ್ಷಣವೇ ಈ ಹೇಳಿಕೆಯನ್ನು ತಳ್ಳಿಹಾಕಿದೆ ಮತ್ತು ಇದು ಸಂಬಂಧಪಟ್ಟ ವ್ಯಕ್ತಿಯ ವೈಯಕ್ತಿಕ ಅಭಿಪ್ರಾಯ ಎಂದು ಸ್ಪಷ್ಟಪಡಿಸಿದೆ. ಬಾಂಗ್ಲಾದೇಶವು ಎಲ್ಲಾ ರಾಷ್ಟ್ರಗಳ ಸಾರ್ವಭೌಮತ್ವವನ್ನು ಗೌರವಿಸುತ್ತದೆ ಮತ್ತು ಭಾರತದೊಂದಿಗೆ ಸೌಹಾರ್ದಯುತ ಸಂಬಂಧವನ್ನು ಮುಂದುವರಿಸಲು ಬದ್ಧವಾಗಿದೆ ಎಂದು ಅದು ಹೇಳಿದೆ. ಈ ಸ್ಪಷ್ಟೀಕರಣವು ಉಭಯ ದೇಶಗಳ ನಡುವಿನ ಸಂಬಂಧ ಮತ್ತಷ್ಟು ಹದಗೆಡುವುದನ್ನು ತಡೆಯುವಲ್ಲಿ ಸಹಕಾರಿಯಾಗಿದೆ. ಆದರೆ, ಇಂತಹ ಘಟನೆಗಳು ನೆರೆಯ ರಾಷ್ಟ್ರಗಳು ಪರಸ್ಪರರ ಬಗ್ಗೆ ಎಚ್ಚರಿಕೆಯಿಂದ ಇರಬೇಕಾದ ಮತ್ತು ಜವಾಬ್ದಾರಿಯುತವಾಗಿ ವರ್ತಿಸಬೇಕಾದ ಅಗತ್ಯವನ್ನು ಎತ್ತಿ ತೋರಿಸುತ್ತವೆ. ನೆರೆಯ ರಾಷ್ಟ್ರವಾಗಿ ಬಾಂಗ್ಲಾದೇಶವು ಭವಿಷ್ಯದಲ್ಲಿ ಇಂತಹ ಬೇಜವಾಬ್ದಾರಿ ನಡವಳಿಕೆಯನ್ನು ಪುನರಾವರ್ತಿಸದಂತೆ ಎಚ್ಚರವಹಿಸುವುದು ಅತ್ಯಂತ ಮುಖ್ಯ.

**ಪ್ರತಿಷ್ಠಿತ ಟಾಟಾ ಸಂಶೋಧನಾ ಕೇಂದ್ರಕ್ಕೆ 2025-26ನೇ ಸಾಲಿನಲ್ಲಿ ಆಯ್ಕೆಯಾದ ನಿಮಿತ್ತ ವಿದ್ಯಾರ್ಥಿಯ ಪರಿಚಯ ಲೇಖನ**

## ಕೌತುಕಗಳ ಅರಿಯುವ ಹಂಬಲದಲ್ಲಿ ವಿಶ್ವನಾಥ್ ಮಾಳಿ



ಮೂಲತಃ ಅಥಣಿಯ, ಆದರೆ ಉದ್ಯೋಗ ನಿಮಿತ್ತ ಕರ್ನಾಟಕದ ಹೃದಯ ಭಾಗದಲ್ಲಿರುವ ಗದಗ ಜಿಲ್ಲೆಯ ಪುಟ್ಟ ತಾಲೂಕು ಮುಂಡರಗಿಯಲ್ಲಿ ವಾಸವಾಗಿರುವ ಸುರೇಶ್ ಮಾಳಿ ಅವರ ಪುತ್ರ ವಿಶ್ವನಾಥ್ ಮುಂಡರಗಿಯಲ್ಲಿಯೇ ತನ್ನ ಪ್ರಾಥಮಿಕ ಶಿಕ್ಷಣವನ್ನು ಪೂರೈಸಿದ್ದಾನೆ. ತನ್ನ ಅಸೀಮ ಆಸಕ್ತಿ ಮತ್ತು ಶ್ರದ್ಧೆಯ ಪರಿಣಾಮವಾಗಿ ಭಾರತದ ಅತ್ಯುನ್ನತ ಸಂಶೋಧನಾ ಸಂಸ್ಥೆಯಲ್ಲಿ ಒಂದಾದ ಟಾಟಾ ಇನ್ಸ್ಟಿಟ್ಯೂಟ್ ಆಫ್ ಫಂಡಮೆಂಟಲ್ ರಿಸರ್ಚ್ (TIFR) ಸೆಂಟರ್‌ನಲ್ಲಿ ಪಿಎಚ್‌ಡಿ ಅಧ್ಯಯನಕ್ಕೆ ಭಾರತ ದೇಶದ ಪ್ರತಿಭಾನ್ವಿತ 20 ಜನ ವಿದ್ಯಾರ್ಥಿಗಳಲ್ಲಿ ಒಬ್ಬನಾಗಿ ಆಯ್ಕೆಯಾಗಿದ್ದಾನೆ. ವಿಶ್ವನಾಥ್ ಸುರೇಶ್ ಮಾಳಿ ಸಾಧನೆಯ ಹಾದಿ ಅದ್ಭುತವಾದದ್ದು.

ವಿಜ್ಞಾನ ವಿಷಯವನ್ನು ಹೃದಯದಿಂದ ಅರ್ಥ ಮಾಡಿಕೊಳ್ಳಲು ಪ್ರಾರಂಭಿಸಿದಾಗ ಕಲಿಕೆ ಎಂಬುದು ಓರ್ವ ವ್ಯಕ್ತಿಯ ವರ್ತನೆ, ಒಳನೋಟ, ಆಸಕ್ತಿ ಮತ್ತು ಚಿಂತನೆಗಳ ಒಟ್ಟು ಒಳಹೂರಣವನ್ನು ಹೊಂದಿರುವ ತಪಸ್ಸಿನಂತೆ ಎಂದು ಭಾವಿಸಿದ ವಿಶ್ವನಾಥ್ ಎಲ್ಲಿಯೂ ಎಡವದೆ ತನ್ನ ಕಲಿಕೆಯನ್ನು ಮುಂದುವರೆಸಿ ತನ್ನ ಭವ್ಯ ಭವಿಷ್ಯಕ್ಕೆ ಭದ್ರ ಬುನಾದಿಯನ್ನು ಹಾಕಿದ. ತಂದೆ ಸುರೇಶ್ ಮಾಳಿ ತಾಲೂಕಿನ ನಾಗರಹಳ್ಳಿ ಗ್ರಾಮದ ಪ್ರೌಢಶಾಲೆಯಲ್ಲಿ ಚಿತ್ರಕಲಾ ಶಿಕ್ಷಕರಾಗಿದ್ದು, ತಾಯಿ ಪ್ರತಿಮಾ ಗೃಹಿಣಿ. ಓರ್ವ ಕಿರಿಯ ಸಹೋದರ ಪ್ರತೀಕ ಪಿಯುಸಿ ಓದುತ್ತಿದ್ದಾನೆ.

ದೆಹಲಿ ವಿಶ್ವವಿದ್ಯಾಲಯದ ದೆಹಲಿಯ ಪ್ರಸಿದ್ಧ ಸೆಂಟ್ ಸ್ಟೀಫನ್ ಕಾಲೇಜಿನಲ್ಲಿ ಪದವಿ ಅಧ್ಯಯನದೊಂದಿಗೆ ಪ್ರಾರಂಭವಾದ ಈತನ ವಿಜ್ಞಾನದ ಆಸಕ್ತಿ ಅದರಲ್ಲೂ ಮುಖ್ಯವಾಗಿ ಭೌತಶಾಸ್ತ್ರದಲ್ಲಿನ ತೀವ್ರ ಆಸಕ್ತಿ ಹೆಚ್ಚಿನ ಅಧ್ಯಯನ ಮಾಡಲು ಪ್ರೇರೇಪಿಸಿತು. ಈ ತಾತ್ವಿಕ ಆಕರ್ಷಣೆಯು ಮುಂದೆ ಐಐಟಿ ರೂಪರ್ ಪಂಜಾಬ್‌ನಲ್ಲಿ ತಮ್ಮ ಸ್ನಾತಕೋತ್ತರ ವಿದ್ಯಾಭ್ಯಾಸವನ್ನು ಮುಂದುವರಿಸಲು ಪ್ರೇರೇಪಿಸಿತು.

ವಿಜ್ಞಾನ ಕೂಡ ಆಧ್ಯಾತ್ಮದಂತೆ ತತ್ವಜ್ಞಾನದಂತೆ, ವಿಜ್ಞಾನವೂ ಕೂಡ ತೀವ್ರ ತಾಳ್ಮೆ ಮತ್ತು ತಾಕತ್ತನ್ನು ಬೇಡುತ್ತದೆ ಎಂದು ವಿಶ್ವನಾಥ್ ಹೇಳುತ್ತಾರೆ. ಪ್ರತಿದಿನವೂ ಹೊಸ ಸವಾಲುಗಳು, ಸ್ಪರ್ಧೆಯ ಒತ್ತಡ, ಆತ್ಮಶಂಕೆಗಳ ನಡುವೆಯೂ ಕೂಡ ಭರವಸೆಯನ್ನು ಕಳೆದುಕೊಳ್ಳದ ವಿಶ್ವನಾಥ್ ಹೊಸ ಕಲಿಕೆಗೆ ಸವಾಲುಗಳಿಗೆ ತಮ್ಮನ್ನು ತಾವು ಒಡ್ಡಿಕೊಂಡರು. ಪರಿಣಾಮವಾಗಿ ಟಿಐಎಫ್‌ಆರ್ ಪ್ರವೇಶ ಸಾಧನೆಯ ಮೊದಲ ಮೆಟ್ಟಿಲನ್ನು ಹತ್ತಿದರು.

ಟಿಐಎಫ್‌ಆರ್‌ನಲ್ಲಿ ಓದಲು ಮೊದಲು ಅಲ್ಲಿಯ ಪ್ರವೇಶ ಪರೀಕ್ಷೆಯನ್ನು ಪಾಸ್ ಆಗಬೇಕು. ಈ ಪ್ರವೇಶ ಪರೀಕ್ಷೆ ಲಿಖಿತವಾಗಿದ್ದು, ಇಲ್ಲಿ ಪಾಸಾದ ನಂತರ ಎರಡನೇ ಸುತ್ತಿನಲ್ಲಿ ಮೌಖಿಕ ಇಲ್ಲವೇ ಮತ್ತೊಂದು ಲಿಖಿತ ಪರೀಕ್ಷೆಯನ್ನು ಎದುರಿಸಬೇಕಾಗುತ್ತದೆ. ಇದಲ್ಲದೆ ಪರೀಕ್ಷೆ ಇಲ್ಲದೆ ಪ್ರವೇಶ ಪಡೆಯಲು ಜೆಸ್ಟ್ (jest) ಗೇಟ್ (gate) ನೆಟ್ (net) ಪರೀಕ್ಷೆಗಳಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರಗಳಲ್ಲಿ ಹೆಚ್ಚು ಅಂಕಗಳನ್ನು ಗಳಿಸಿರಬೇಕು.

ಟಿಐಎಫ್‌ಆರ್‌ನ ಫೆಲೋಶಿಪ್ ಪಡೆದ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗೆ ಪ್ರತಿ ತಿಂಗಳು 16 ಸಾವಿರ ರೂಗಳು, ಪಿಎಚ್‌ಡಿ ಫೆಲೋಶಿಪ್‌ನ ವಿದ್ಯಾರ್ಥಿಗಳಿಗೆ ಮೊದಲ ವರ್ಷ ಪ್ರತಿ ತಿಂಗಳು 21 ಸಾವಿರ, ಎರಡನೇ ವರ್ಷ 35 ಸಾವಿರ ಪ್ರತಿ ತಿಂಗಳು ದೊರೆಯುತ್ತದೆ. ಭಾರತದಾದ್ಯಂತ ಟಿಐಎಫ್‌ಆರ್‌ನ ಒಟ್ಟು ಏಳು ಸಂಶೋಧನಾ ಕೇಂದ್ರಗಳಿದ್ದು, ಮುಖ್ಯ ಕೇಂದ್ರವು ಮುಂಬೈಯಲ್ಲಿ ಇದೆ. ಅದಲ್ಲದೆ ಹೋಮಿ ಬಾಬಾ ಸೆಂಟರ್ ಫಾರ್ ಸೈನ್ಸ್ ಎಜುಕೇಶನ್ ಎಂಬ ಶಿಕ್ಷಣ ಸಂಸ್ಥೆಯು ಕೂಡ ಮುಂಬೈಯಲ್ಲಿದೆ. ಮಹಾರಾಷ್ಟ್ರದ ಪುಣೆಯಲ್ಲಿ ನ್ಯಾಷನಲ್ ಸೆಂಟರ್ ಫಾರ್ ರೇಡಿಯೋ ಅಸ್ಟ್ರೋ ಫಿಸಿಕ್ಸ್ ಕೇಂದ್ರವಿದ್ದು, ಹೈದರಾಬಾದ್‌ನಲ್ಲಿ ಕೂಡ ಟಿಐಎಫ್‌ಆರ್‌ನ ಶಿಕ್ಷಣ ಕೇಂದ್ರವಿದೆ. ನಮ್ಮ ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ (ಅಪ್ಲಿಕೇಶನ್ ಮೆಥೆಮೆಟಿಕ್ಸ್), ಐಸಿಟಿಎಸ್ (ಇಂಟರ್ನ್ಯಾಷನಲ್ ಸೆಂಟರ್ ಫಾರ್ ಥೆರಾಟಿಕಲ್ ಸೈನ್ಸಸ್), ಎನ್‌ಸಿಬಿಎಸ್ (ನ್ಯಾಷನಲ್ ಸೆಂಟರ್ ಫಾರ್ ಬಯಾಲಜಿಕಲ್ ಸೈನ್ಸ್ ) ಒಟ್ಟು ಮೂರು ಕೇಂದ್ರಗಳಿದ್ದು, ಟಿಐಎಫ್‌ಆರ್‌ನಲ್ಲಿ ಶಿಕ್ಷಣ ಪಡೆಯಲು ಬಯಸುವವರಿಂದ ಸಂಸ್ಥೆಯು ಗುಣಮಟ್ಟಕ್ಕೆ ಆದ್ಯತೆ ನೀಡುತ್ತಾರೆಯೇ ಹೊರತು ಅಗಾಧ ಪ್ರಮಾಣತೆಗಲ್ಲ.

ತತ್ವಶಾಸ್ತ್ರದಲ್ಲಿ ಬಲವಾದ ಸೆಲೆ ಮತ್ತು ನೆಲೆಯನ್ನು ನಿರ್ಮಿಸಿದ ಭೌತಿಕ ವಿಶ್ವದ ರಹಸ್ಯಗಳನ್ನು ಅರ್ಥಮಾಡಿಕೊಳ್ಳುವಲ್ಲಿ ಪ್ರಯತ್ನಶೀಲತೆ ಮತ್ತು ಆ ಮೂಲಕ ಸಮಾಜಕ್ಕೆ ಉತ್ತಮ ಕೊಡುಗೆಯನ್ನು ನೀಡುವುದು ತನ್ನ ಗುರಿ ಎಂದು ಹೇಳುವ ವಿಶ್ವನಾಥನ ಆತ್ಮವಿಶ್ವಾಸದ ಮಾತುಗಳು ಸಂತಸ ಮತ್ತು ಹೆಮ್ಮೆಯನ್ನು ಮೂಡಿಸುತ್ತದೆ.

ಅತ್ಯಂತ ಚಿಕ್ಕ ತಾಲೂಕು ಪ್ರದೇಶವೊಂದರಲ್ಲಿ ಬೆಳೆದು ವೈಯುಕ್ತಿಕ ಪರಿಶ್ರಮ, ಶ್ರದ್ಧೆ ಮತ್ತು ಶ್ರಮದ ಫಲಶ್ರುತಿಯಾಗಿ ವಿಶ್ವ ಭೂಪಟದಲ್ಲಿ ವಿಶ್ವನಾಥ್ ಕಾಣಿಸಿಕೊಳ್ಳುತ್ತಿರುವುದು ಯುವ ಸಮುದಾಯಕ್ಕೆ ಸ್ಫೂರ್ತಿದಾಯಕ ವಿಷಯವಾಗಿದೆ. ಇಂದಿನ ಮೊಬೈಲ್ ಮತ್ತು ಇಂಟರ್ನೆಟ್ ಯುಗದಲ್ಲಿ ರೀಲ್ ಮತ್ತು ಗೇಮ್ಸ್‌ಗಳಲ್ಲಿ ತೊಡಗಿಸಿಕೊಂಡು ತಮ್ಮ ರಿಯಲ್ ಬದುಕನ್ನು ಹಾಳು ಮಾಡಿಕೊಳ್ಳುತ್ತಿರುವ ಯುವಕರ ಮಧ್ಯದಲ್ಲಿ ಸಂಶೋಧನೆಗಾಗಿಯೇ ತಮ್ಮ ಬದುಕನ್ನು ಮುಡುಪಾಗಿರುವ ವಿಶ್ವನಾಥ್ ಅವರ ಸಾಧನೆ ಹೀಗೆಯೇ ಮುಂದುವರೆಯಲಿ. ಅವರ ಸಾಧನೆಯಿಂದ ಇನ್ನೂ ಸಾಕಷ್ಟು ಜನ ಪ್ರೇರೇಪಿತರಾಗಲಿ. ಸಮಾಜದ ಹೊಸ ತಲೆಮಾರಿನ ಮಕ್ಕಳಿಗೆ ದಾರಿ ದೀಪವಾಗಲಿ ಎಂದು ಹಾರೈಸುವ...

– ವೀಣಾ ಹೇಮಂತ್‌ಗೌಡ ಪಾಟೀಲ್.
ಮುಂಡರಗಿ.

## ಬೆಂಗಳೂರಿನಲ್ಲಿ ಮತ್ತೆ ಮಳೆ ಅಬ್ಬರ: ವಾಹನ ಸವಾರರು ಪರದಾಟ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಕಳೆದ ಎರಡು ದಿನಗಳಿಂದ ಭಾರೀ ಮಳೆ ಆಗುತ್ತಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ಅದರಂತೆ ಶುಕ್ರವಾರ ಕೂಡ ನಗರದಲ್ಲಿ ವರುಣ ಅಬ್ಬರಿಸಿದ್ದಾನೆ. ನಗರದ ಕೆ.ಆರ್.ವೃತ್ತ, ಕಾರ್ಪೊರೇಷನ್, ವಿಧಾನಸೌಧ, ಮೆಜೆಸ್ಟಿಕ್, ಗಾಂಧಿನಗರ, ಓಕಳಿಪುರಂ, ರಾಜಾಜಿನಗರ, ಗಿರಿನಗರ, ಬಸವೇಶ್ವರ ನಗರ, ಮಲ್ಲೇಶ್ವರಂ, ಆರ್.ಆರ್.ನಗರ, ವಿಜಯನಗರ ಸೇರಿದಂತೆ ನಗರದ ಹಲವೆಡೆ ಮಳೆಯಾಗಿದೆ.

ರಾಜ್ಯಾದ್ಯಂತ ಮುಂದಿನ ಐದು ದಿನ ಗುಡುಗು, ಮಿಂಚು ಸಹಿತ ದಕ್ಷಿಣ ಒಳನಾಡು ಮತ್ತು ಮಲೆನಾಡು ಜಿಲ್ಲೆಗಳಲ್ಲಿ ವ್ಯಾಪಕವಾಗಿ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ಉತ್ತರ ಒಳನಾಡು ಮತ್ತು ಕರಾವಳಿ ಜಿಲ್ಲೆಗಳಲ್ಲಿ ಅಲ್ಲಲ್ಲಿ ತುಂತುರು ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

## SSLC ರಿಸಲ್ಟ್ ಪ್ರಕಟ: ಈ ಬಾರಿಯೂ ಬಾಲಕಿಯರೇ ಮೇಲುಗೈ, 62.34% ಫಲಿತಾಂಶ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

2024–25ನೇ ಸಾಲಿನ SSLC ಪರೀಕ್ಷೆಯ ಫಲಿತಾಂಶ ಪ್ರಕಟವಾಗಿದ್ದು, ಪ್ರತಿ ವರ್ಷದಂತೆ ಈ ಬಾರಿಯೂ ಬಾಲಕಿಯರೇ ಮೇಲುಗೈ ಸಾಧಿಸಿದ್ದಾರೆ.

ಕಳೆದ ಮಾರ್ಚ್–ಏಪ್ರಿಲ್‌ನಲ್ಲಿ ನಡೆದಿದ್ದ SSLC ಪರೀಕ್ಷೆಯ ಫಲಿತಾಂಶ ಪ್ರಕಟವಾಗಿದ್ದು, ಈ ಬಾರಿ 62.34% ಫಲಿತಾಂಶ ಬಂದಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಮಲ್ಲೇಶ್ವರಂನಲ್ಲಿ ನಡೆಸಿದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಒಟ್ಟು 22 ವಿದ್ಯಾರ್ಥಿಗಳು 625ಕ್ಕೆ 625 ಅಂಕಗಳನ್ನು ಪಡೆದಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆ (ಶೇ.91.12), ಉಡುಪಿ ಜಿಲ್ಲೆ (ಶೇ.89.96), ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆ ಮೊದಲ ನಾಲ್ಕು ಸ್ಥಾನ ಪಡೆದಿವೆ.

## ಶಶಾಂಕನ 'ಚಿಟ್ಟೆ' ಕಿರುಚಿತ್ರ ಬಿಡುಗಡೆ

■ ವಿಜಯಸಾಕ್ಷಿ ಸುದ್ದಿ, ಕುಂದಗೋಳ



ಸಿದ್ದುಕೃಷ್ಣ ಕ್ರಿಯೇಷನ್ಸ್ ಅವರ 'ಬದಲಾವಣೆ ಜಗದ ನಿಯಮ' ಎಂಬ ಉಪಶೀರ್ಷಿಕೆಯೊಂದಿಗೆ ಯುವ ನಿರ್ದೇಶಕ ಶಶಾಂಕ್ ಢೇಕಣೆಯವರ ನಿರ್ದೇಶನದ ಸಾಮಾಜಿಕ ಸಂದೇಶ ಸಾರುವ 'ಚಿಟ್ಟೆ' ಕನ್ನಡ ಕಿರುಚಿತ್ರವನ್ನು ಕಲ್ಯಾಣಪುರಮಠದ ಶ್ರೀ ಅಭಿನವ ಬಸವಣ್ಣಜ್ಜನವರು ಬಿಡುಗಡೆ ಮಾಡಿದರು.

ಚಿತ್ರ ವೀಕ್ಷಿಸಿದ ನಂತರ ಮಾತನಾಡಿದ ಶ್ರೀಗಳು, ಯುವ ಸಮುದಾಯ ಸಾಮಾಜಿಕ ಕಾರ್ಯಗಳಲ್ಲಿ ತಮ್ಮ ಜವಾಬ್ದಾರಿ ಅರಿತು ನಡೆಯಬೇಕು. ಈ ಚಿತ್ರ ಯುವ ಸಮುದಾಯಕ್ಕೆ ಮತ್ತು ಸಮಾಜಕ್ಕೆ ಉತ್ತಮ ಸಂದೇಶ ನೀಡುತ್ತದೆ. ಚಿತ್ರತಂಡ ಇಂಥ ಇನ್ನೂ ಹಲವಾರು ಚಿತ್ರಗಳನ್ನು ನಿರ್ಮಿಸಿ ಸಮಾಜಕ್ಕೆ ಒಳ್ಳೆಯ ಸಂದೇಶ ನೀಡಲಿ ಎಂದು ಚಿತ್ರತಂಡಕ್ಕೆ ಶುಭ ಹಾರೈಸಿದರು.

ಕಿರುಚಿತ್ರದಲ್ಲಿ ಕಲಾವಿದರಾಗಿ ಸಾತ್ವಿಕ್ ಢೇಕಣೆ, ಸಿದ್ದುಕೃಷ್ಣ, ಡಿಂಪಲ್, ಮಹೇಶಗೌಡ ಪಾಟೀಲ್, ರಾಧಿಕಾ ಮಹೇಶಗೌಡ, ಗೋವಿಂದ್ ಮಾಂಡ್ರೆ, ಬಸವಂತಪ್ಪ ಹರಕುಣಿ, ಮಾಣಿಕ್ಯ ಚಿಲ್ಲೂರ, ಭೂಪಾಲ್ ಘೋಂಗಡಿ, ಯಲ್ಲಪ್ಪ ಮೇಗುಂಡಿ, ಮಹ್ಮದ್ ಯಾಸೀನ್, ವಿಕ್ರಮ್ ಕುಮಾರ್, ಶಕ್ತಿ ಪ್ರಸಾದ್, ಖಾದರ್ ಸಾಬ್ ಮುಂತಾದವರಿದ್ದಾರೆ.

ಛಾಯಾಗ್ರಹಣ ವೀರು ಪಾಟೀಲ್ ಪುಣೆ, ಕಥೆ–ಸಂಭಾಷಣೆ ಗೋವಿಂದ್ ಮಾಂಡ್ರೆ, ವಿದ್ಯಾ ಮಾಂಡ್ರೆ ಪ್ರಸಾಧನ, ಶಿಖಾ ಕೇಶವಿನ್ಯಾಸ, ಅಶೋಕ, ಕಾಳಭೈರವ, ಗಾಯತ್ರಿ ವಸ್ತ್ರವಿನ್ಯಾಸ, ಗುರು ಪಾಟೀಲ್ ಕುಂದಾಪುರ ಸಂಕಲನ, ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ ಪತ್ರಿಕಾ ಸಂಪರ್ಕ, ಮಹೇಶಗೌಡ ಪಾಟೀಲ್ ಸಹ ನಿರ್ದೇಶನವಿದ್ದು, ಹುಬ್ಬಳ್ಳಿ, ಧಾರವಾಡ, ಲಕ್ಷ್ಮೇಶ್ವರ, ಸಂಶಿ, ಕುಂದಗೋಳ ಮುಂತಾದೆಡೆ ಚಿತ್ರೀಕರಣ ನಡೆಸಲಾಗಿದೆ.

ಇಲ್ಲಿನ ಕಲಾವಿದರು [illegible] ಅಭಿನಯಿಸಿದ್ದಾರೆ ಎಂದು ಚಿತ್ರದ ನಿರ್ದೇಶಕರಾದ ಶಶಾಂಕ್, ನಿರ್ಮಾಪಕಿ ರೇಖಾ ಸಿದ್ದುಕೃಷ್ಣ ತಿಳಿಸಿದರು. ಈ ಸಂದರ್ಭದಲ್ಲಿ ಗುರುಸಿದ್ದಪ್ಪ ಉಪ್ಪಿನ, ಗೋವಿಂದ ಮಾಂಡ್ರೆ, ಗುರು ಪಾಟೀಲ, ವೀರೂ ಪಾಟೀಲ, ಸಾತ್ವಿಕ್ ಢೇಕಣೆ, ಮಹೇಶಗೌಡ ಪಾಟೀಲ, ಸಿದ್ದುಕೃಷ್ಣ, ಭೂಪಾಲ ಘೋಂಗಡಿ, ಶಕ್ತಿಪ್ರಸಾದ, ವಿಕ್ರಮ ಕುಮಾರ, ಶ್ರೀಪಾದಗೌಡ ಪಾಟೀಲ ಮತ್ತು ಚಿತ್ರತಂಡದ ಕಲಾವಿದರು ಉಪಸ್ಥಿತರಿದ್ದರು.

## ಬಾಲ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯ 2025ನೇ ಸಾಲಿನ ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಿದೆ.

ಗದಗ ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ, ಕ್ರೀಡೆ, ಸಮಾಜಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಸಂರಕ್ಷಣೆ, ಕಲೆ–ಸಂಸ್ಕೃತಿ ಮತ್ತು ನೂತನ ಆವಿಷ್ಕಾರಗಳನ್ನು ಮಾಡಿ ಉತ್ತಮ ಸಾಧನೆ ಮಾಡಿದ ಮಕ್ಕಳು ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

ಮಕ್ಕಳು ಅಥವಾ ಅವರ ಪಾಲಕರು 31.07.2025ರೊಳಗೆ online portal:https://awards.gov.in ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಗದಗ ಕೊಠಡಿ ಸಂಖ್ಯೆ:225, ಜಿಲ್ಲಾಡಳಿತ ಭವನ–ಗದಗ ಇಲ್ಲಿಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬೇಕೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ರಫೀಕಾ ಎ.ಹಳ್ಳೂರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸುಹಾಸ್ ಶೆಟ್ಟಿ ಕೊಲೆ ಬೆನ್ನಲ್ಲೇ ಮಂಗಳೂರಿನಲ್ಲಿ ಉದ್ವಿಗ್ನ ವಾತಾವರಣ: ಮೂವರಿಗೆ ಚಾಕು ಇರಿತ!


■ ವಿಜಯಸಾಕ್ಷಿ ಸುದ್ದಿ, ಮಂಗಳೂರು

ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಕೊಲೆ ಪ್ರಕರಣದ ಬೆನ್ನಲ್ಲೇ ಮಂಗಳೂರಿನಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣ ಆಗಿದ್ದು, ಮೂವರಿಗೆ ಚಾಕು ಇರಿಯಲಾಗಿದೆ. ಮಂಗಳೂರಿನ ಸುತ್ತಮುತ್ತ ಕಣ್ಣೂರು, ಕೊಂಚಾಡಿ ಮತ್ತು ಉಳ್ಳಾಲದಲ್ಲಿ ಚಾಕು ಇರಿತ ಪ್ರಕರಣಗಳು ವರದಿಯಾಗಿವೆ.

ಉಳ್ಳಾಲದ ಫೈಝುಲ್, ಕೊಂಚಾಡಿಯ ಮೊಹ್ಮದ್ ಲುಕ್ಮಾನ್, ಕಣ್ಣೂರಿನ ಇರ್ಶಾದ್‌ಗೆ ಎಂಬುವರಿಗೆ ದುಷ್ಕರ್ಮಿಗಳು ಚಾಕುವಿನಿಂದ ಇರಿದು ಪರಾರಿಯಾಗಿದ್ದಾರೆ. ಹಲ್ಲೆಗೊಳಗಾದ ಮೂವರಿಗೂ ಸ್ಥಳೀಯ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಮಂಗಳೂರು ವ್ಯಾಪ್ತಿಯಲ್ಲಿ ತಡರಾತ್ರಿ ಮತ್ತು ಮುಂಜಾನೆ ಈ ಪ್ರಕರಣಗಳು ನಡೆದಿವೆ. ಉಡುಪಿ ತಾಲೂಕಿನ ಆತ್ರಾಡಿಯಲ್ಲಿ ಗುರುವಾರ ರಾತ್ರಿ ಓರ್ವ ಮುಸ್ಲಿಂ ಯುವಕನನ್ನು ಕೊಲೆ ಮಾಡಲು ಯತ್ನಿಸಲಾಗಿದೆ. ಚಾಲಕ ಅಬೂಬಕ್ಕರ್ ಆಟೋ ಅಡ್ಡಗಟ್ಟಿದ ದುಷ್ಕರ್ಮಿಗಳು ತಲ್ವಾರ್ ಮತ್ತು ಬಾಟಲ್ನಿಂದ ಹಲ್ಲೆ ಮಾಡಲು ಮುಂದಾಗಿದ್ದಾರೆ. ಅಬೂಬಕ್ಕರ್ ತಪ್ಪಿಸಿಕೊಂಡು ಹೋಗಿ ಹಿರಿಯಡಕ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

## ಶಾಸಕ ಸ್ಥಾನಕ್ಕೆ ದಿಢೀರ್ ರಾಜೀನಾಮೆ ಕೊಟ್ಟ ಶಿವಾನಂದ ಪಾಟೀಲ್!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ರಾಜ್ಯ ರಾಜಕೀಯದಲ್ಲಿ ಶುಕ್ರವಾರ ಮಹತ್ವದ ಬೆಳವಣಿಗೆ ಒಂದು ನಡೆದಿದೆ. ತಮ್ಮ ಶಾಸಕ ಸ್ಥಾನಕ್ಕೆ ಸಚಿವ ಶಿವಾನಂದ ಪಾಟೀಲ್ ದಿಢೀರ್ ರಾಜೀನಾಮೆ ಸಲ್ಲಿಸಿದ್ದಾರೆ. ಸ್ಪೀಕರ್ ಯುಟಿ ಖಾದರ್ ಅವರಿಗೆ ಶಿವಾನಂದ ಪಾಟೀಲ್ ರಾಜೀನಾಮೆ ನೀಡಿದ್ದು, ಈ ಬೆಳವಣಿಗೆ ರಾಜ್ಯದಲ್ಲಿ ಭಾರೀ ಕುತೂಹಲ ಮೂಡಿಸಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬೆನ್ನಲ್ಲೆ ಬಸನಗೌಡ ಪಾಟೀಲ್ ಯತ್ನಾಳ್, ಉಗ್ರಾವತಾರದ ಮಾತುಗಳನ್ನಾಡುತ್ತಿದ್ದರು, ಈ ಹಂತದಲ್ಲಿ ಪ್ರತಿಕ್ರಿಯೆ ವೇಳೆ ಕಾಂಗ್ರೆಸ್‌ನ ಶಾಸಕರೊಂದಿಗೆ ಸಂಘರ್ಷಕ್ಕೆ ಇಳಿದಿದ್ದಾರೆ. ಸಚಿವ ಶಿವಾನಂದ ಪಾಟೀಲ್ ಹಾಗೂ ಹುನಗುಂದ ಕ್ಷೇತ್ರದ ಕಾಂಗ್ರೆಸ್ ಶಾಸಕ ವಿಜಯಾನಂದ ಕಾಶಪ್ಪನವರ್ ಅವರಿಗೆ ಯತ್ನಾಳ್ ಸವಾಲು ಹಾಕಿದ್ದರು.

ಇಬ್ಬರು ರಾಜೀನಾಮೆ ನೀಡಿ ನನ್ನ ವಿರುದ್ಧ ಚುನಾವಣೆಗೆ ನಿಲ್ಲಲಿ, ಯಾರು ಗೆಲ್ಲುತ್ತಾರೋ ನೋಡೋಣ ಎಂದು ಸವಾಲು ಹಾಕಿದ್ದರು. ಅದಕ್ಕೆ ಪ್ರತಿಕ್ರಿಯೆ ಎಂಬಂತೆ ಶಿವಾನಂದ ಪಾಟೀಲ್ ಶುಕ್ರವಾರ ತಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಶಿವಾನಂದ ಪಾಟೀಲ್ ಹೇಳಿದ್ದೇನು? ರಾಜೀನಾಮೆ ನೀಡಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಶಿವಾನಂದ ಪಾಟೀಲ್, ಯತ್ನಾಳ್ ಅವರ ಸವಾಲು ಸ್ವೀಕಾರ ಮಾಡಿ ಸ್ಪೀಕರ್ ಅವರಿಗೆ ರಾಜೀನಾಮೆ ನೀಡಿದ್ದೇನೆ. ಪಕ್ಷಕ್ಕೂ, ಸಿಎಂಗೂ ಇದು ಸಂಬಂಧಿಸಿಲ್ಲ ಎಂದು ಹೇಳಿದರು. ಡೆಡ್ ಲೈನ್ ಫಿಕ್ಸ್ ಮಾಡಿದ್ದು ಯತ್ನಾಳ್. ಶುಕ್ರವಾರದೊಳಗೆ ರಾಜೀನಾಮೆ ಕೊಡದಿದ್ದರೆ ಅವರಪ್ಪನಿಗೆ ಹುಟ್ಟಿಲ್ಲ ಎಂದಿದ್ದರು. ಅದಕ್ಕೆ ಈಗ ನಾನು ರಾಜೀನಾಮೆ ನೀಡಿದ್ದೇನೆ. ಹೀಗಾಗಿ ಯತ್ನಾಳ್ ಕೂಡ ರಾಜೀನಾಮೆ ಕೊಡಲಿ. ವಿಜಯಪುರದಲ್ಲಾದ್ರೂ ಸರಿ, ಬಸವನಬಾಗೇವಾಡಿಯಲ್ಲಾದ್ರೂ ಸರಿ ಅವರ ಎದುರು ಸ್ಪರ್ಧೆ ಮಾಡುತ್ತೇನೆ ಎಂದು ಘೋಷಣೆ ಮಾಡಿದರು.

ಯತ್ನಾಳ್ ಅವರ ತಂದೆ ತಾಯಿಗಳಿಗೆ ಹುಟ್ಟಿದ್ದಾರೆ. ನಾನು ಆ ಮಾತುಗಳನ್ನ ಆಡಲ್ಲ. ಆದರೆ ನನ್ನ ಪೂರ್ವಜರ ಬಗ್ಗೆ ಪಾಟೀಲ್ ಹೆಸರಿನ ಬಗ್ಗೆ ಮಾತನಾಡಿದ್ದಕ್ಕೆ ನೋವಾಗಿದೆ ಎಂದು ಬೇಸರ ಹೊರ ಹಾಕಿದರು.

**ಪೌರ ನೌಕರರ ಬೇಡಿಕೆಗಳನ್ನು ಈಡೇರಿಸುವಂತೆ ನಗರಸಭೆ ಪೌರಾಯುಕ್ತರಿಗೆ ಮನವಿ**

## ಬೇಡಿಕೆ ಈಡೇರದಿದ್ದಲ್ಲಿ ಕೆಲಸ ಸ್ಥಗಿತ

■ ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಕೇಂದ್ರ ಕಚೇರಿ ಚಿತ್ರದುರ್ಗ ಗದಗ–ಬೆಟಗೇರಿ ನಗರಸಭೆ ಕಾರ್ಯಾಲಯ ಶಾಖೆಯ ಅಧ್ಯಕ್ಷರಾದ ಸಿ.ಆರ್. ಹಾದಿಮನಿ ಹಾಗೂ ಜಿಲ್ಲಾಧ್ಯಕ್ಷ ಹೇಮೇಶ ಯಟ್ಟಿ, ಜಿಲ್ಲಾ ಉಪಾಧ್ಯಕ್ಷ ಕೆಂಚಪ್ಪ ಎಫ್.ಪೂಜಾರ, ಗೌರವ ಅಧ್ಯಕ್ಷ ನಾಗೇಶ ಬಳ್ಳಾರಿ ಇವರುಗಳ ನೇತೃತ್ವದಲ್ಲಿ ಗದಗ–ಬೆಟಗೇರಿ ನಗರಸಭೆಯ ಪೌರಾಯುಕ್ತರಿಗೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಿ.ಆರ್. ಹಾದಿಮನಿ ಮಾತನಾಡಿ, ರಾಜ್ಯ ಪೌರ ನೌಕರರ ಸಂಘದ ನಿರ್ದೇಶನದಂತೆ ಗದಗ ಜಿಲ್ಲೆಯಲ್ಲಿ ಬರುವ ನಗರ ಸ್ಥಳೀಯ ಸಂಸ್ಥೆಗಳಿಂದ 12-04-2025ರಿಂದ 26-05-2025ರವರೆಗೆ ಸಾರ್ವಜನಿಕರಿಗೆ ತೊಂದರೆಯಾಗದಂತೆ 45 ದಿನಗಳವರೆಗೆ ಕಪ್ಪು ಬಟ್ಟೆ ಧರಿಸಿ ಕರ್ತವ್ಯ ನಿರ್ವಹಿಸುತ್ತಾ ಅನಿರ್ದಿಷ್ಟಾವಧಿ ಬಹಿಷ್ಕಾರವನ್ನು ಹಮ್ಮಿಕೊಳ್ಳಲಾಗಿದೆ.

ಅದರಂತೆ ನಿಗದಿತ ಅವಧಿಯಲ್ಲಿ ಪೌರನೌಕರರ ಬೇಡಿಕೆಗಳು ಈಡೇರದೇ ಇದ್ದಲ್ಲಿ ಕಚೇರಿ ಕೆಲಸಗಳನ್ನು ಹಾಗೂ ಸ್ವಚ್ಛತೆ ಕೆಲಸವನ್ನು, ನೀರು ಸರಬರಾಜು ಮತ್ತು ಬೀದಿ ದೀಪ ನಿರ್ವಹಣೆಯನ್ನು ಸ್ಥಗಿತಗೊಳಿಸಿ ಮೇ 27ರಿಂದ ಅನಿರ್ದಿಷ್ಟ ಕಾಲ ಮುಷ್ಕರ ಮಾಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಹಿರಿಯರಾದ ಶೇಖಪ್ಪ ತಮ್ಮಣ್ಣವರ, ವಿರೂಪಾಕ್ಷಪ್ಪ ರಾಮಗಿರಿ, ಸಣ್ಣರಾಮಪ್ಪ ಬಳ್ಳಾರಿ, ವೆಂಕಟೇಶ ಬಳ್ಳಾರಿ, ಅರವಿಂದ ಕುರ್ತಕೋಟಿ, ಸಣ್ಣಪ್ಪ ಬೋಳಮ್ಮನವರ, ಪಂಚಾಕ್ಷರಿ ದೊಡ್ಡಮನಿ, ಆಂಜನೇಯ ಪೂಜಾರ, ಶಿವು ಜಂಬಲದಿನ್ನಿ, ವಿಶ್ವನಾಥ ದೊಡ್ಡಮನಿ, ಲಕ್ಷ್ಮಣ ಕೋಟ್ನಿಕಲ್, ಶ್ರೀಪಾದ ಹೊಸಳ್ಳಿ, ನಾರಾಯಣ ಬಳ್ಳಾರಿ, ಮಂಜು ನರಗುಂದ, ರಮೇಶ ಬಾರಕೇರ, ಪರಶುರಾಮ ಸಂಗಾಪೂರ, ಮಲ್ಲಿಕಾರ್ಜುನ ನಾವಳ್ಳಿ, ಎಫ್.ಬಿ. ಬೆನ್ನಾಮಟ್ಟಿ, ಟಿ.ಟಿ. ಉಪ್ಪಾರ, ಮೈಲಾರಪ್ಪ ಬಂಡಿವಾಡ, ರಂಗನಾಥ ಖೋಣಿ, ರಾಜು ಆರಟ್ಟಿ, ರಿಯಾಜ್ ಬೊದ್ಲೆಖಾನ, ಗುರು ಒಡೆಯರ, ರಾಘವೇಂದ್ರ ಅಕ್ಕಿ, ರಾಮು ಕೋಟ್ನಿಕಲ್, ದುರಗಪ್ಪ ಪೂಜಾರ, ಶಿವಲಿಂಗಪ್ಪ ಸೋಮಪೂರ, ಸಂಗವ್ವ ಸೋಮಪೂರ, ಮಂಜುಳಾ ಯಗ್ಗಪಲ್ಲೆ, ಶಂಕರವ್ವ ಹರಿಜನ ಸೇರಿದಂತೆ ಪೌರಕಾರ್ಮಿಕರು, ಲೋಡರ್ಸ್, ಘನತ್ಯಾಜ್ಯ ವಾಹನ ಚಾಲಕರು, ಕ್ಲೀನರ್ಸ್, ಸೂಪರವೈಸರ್, ನೀರು ಸರಬರಾಜು ಸಿಬ್ಬಂದಿಗಳು ಉಪಸ್ಥಿತರಿದ್ದರು.



ಕಾರ್ಮಿಕ ದಿನಾಚರಣೆಯ ಅಂಗವಾಗಿ ಕಟ್ಟಡ ನಿರ್ಮಾಣ ಕಾರ್ಮಿಕರ ಮಹಾಸಂಘದ ವತಿಯಿಂದ ಕ್ರಿಕೆಟ್ ಪಂದ್ಯ ಹಮ್ಮಿಕೊಳ್ಳಲಾಗಿತ್ತು. ಈ ಪಂದ್ಯದಲ್ಲಿ ಆಲೂಮಿನಿಯಂ ತಂಡವು ಜಯಶಾಲಿಯಾದರೆ, ವೆಲ್ಡಿಂಗ್ ತಂಡವು ರನ್ನರ್ ಅಪ್ ಸ್ಥಾನ ಪಡೆಯಿತು. ಈ ಎರಡೂ ತಂಡದವರಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಬಹುಮಾನವನ್ನು ವಿತರಿಸಿದರು. ಈ ಸಂರ್ಭದಲ್ಲಿ ಎಲ್ಲ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

## ನಾಳೆ ಉದಯರಾಗ, ಸಂಧ್ಯಾರಾಗ ವಚನ ಸಂಗೀತ

**■ವಿಜಯಸಾಕ್ಷಿ ಸುದ್ದಿ, ಗದಗ**

ಭೀಷ್ಮಕೆರೆಯ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಉದ್ಯಾನವನದಲ್ಲಿ ಉದಯರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಮೇ 4ರಂದು ರವಿವಾರ ಬೆಳಿಗ್ಗೆ 6:30 ರಿಂದ 7:30ವರೆಗೆ ನಡೆಯುವ ಉದಯರಾಗ ಕಾರ್ಯಕ್ರಮದಲ್ಲಿ ಹೇಮಾವತಿ ಹೂಲಿ ಮತ್ತು ತಂಡದವರಿಂದ ಸುಗಮ ಸಂಗೀತ ಹಾಗೂ ಸಾಯಂಕಾಲ 5:30 ರಿಂದ 6:30 ಗಂಟೆವರೆಗೆ ನಡೆಯುವ ಸಂಧ್ಯಾರಾಗ ಕಾರ್ಯಕ್ರಮ ಪೂಜಾ ಬೇವೂರ ಅವರಿಂದ ವಚನ ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೇ 1ರಿಂದ ಜೂನ್ ಅಂತ್ಯದವರೆಗೆ ವಿಶೇಷ ಅಭಿಯಾನ । ತಾ.ಪಂ ಇಓ ರಾಮಣ್ಣ ದೊಡ್ಡಮನಿ ಮಾಹಿತಿ

# ಆದ್ಯತೆಯ ಮೇರೆಗೆ 'ದುಡಿಯೋಣ ಬಾ'

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ (ನರೇಗಾ) ಯೋಜನೆಯಡಿ ಬೇಸಿಗೆ ಅವಧಿಯಲ್ಲಿ ತಾಲೂಕಿನ ಗ್ರಾಮೀಣ ಪ್ರದೇಶದ ಜನರಿಗೆ ನಿರಂತರವಾಗಿ ಕೆಲಸ ಒದಗಿಸುವ ಉದ್ದೇಶದಿಂದ 'ದುಡಿಯೋಣ ಬಾ' ಅಭಿಯಾನವನ್ನು ಆದ್ಯತೆ ಮೇರೆಗೆ ಹಮ್ಮಿಕೊಳ್ಳಲಾಗಿದೆ.

ಮೇ 01, 2025ರಿಂದ ಆರಂಭವಾಗುವ 'ದುಡಿಯೋಣ ಬಾ' ಅಭಿಯಾನ ಜೂನ್ ಅಂತ್ಯದವರೆಗೆ ನಡೆಯಲಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ರಾಮಣ್ಣ ದೊಡ್ಡಮನಿ ತಿಳಿಸಿದ್ದಾರೆ.

ಇದುವರೆಗೆ ನರೇಗಾ ಯೋಜನೆಯಡಿ ಒಳಗೊಳ್ಳದೆ ಇರುವ ಕುಟುಂಬಗಳನ್ನು ಸಮೀಕ್ಷೆ ಮಾಡಿ ಅರ್ಹರಿಗೆ ಉದ್ಯೋಗ ಚೀಟಿ ವಿತರಿಸಲು ಆದ್ಯತೆ ನೀಡಲಾಗುವುದು.



ಮಹಿಳಾ ಸ್ವ-ಸಹಾಯ ಗುಂಪುಗಳ ಸದಸ್ಯರಿಗೆ ಯೋಜನೆಯ ಕುರಿತು ಅರಿವು ಮೂಡಿಸಿ, ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಮಾಡುವುದು, ಯೋಜನೆಯಿಂದ ಹೊರಗುಳಿದ ದುರ್ಬಲ ಕುಟುಂಬಗಳನ್ನು ಗುರುತಿಸಿ, ಯೋಜನೆಯ ಸೌಲಭ್ಯಗಳನ್ನು ದೊರಕಿಸಿ ಕೊಡಲು ಒತ್ತು ನೀಡಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಈ ಯೋಜನೆಯಡಿ ಗ್ರಾಮೀಣ ಜನರಿಗೆ ಬೇಸಿಗೆ ಅವಧಿಯಲ್ಲಿ ನಿರಂತರವಾಗಿ ಕೆಲಸ ಒದಗಿಸುವುದು ಮತ್ತು ಸ್ವಾವಲಂಬಿಗಳಾಗಿ ಬದುಕುವಂತೆ




ಮಾಡುವುದು ಅಭಿಯಾನದ ಉದ್ದೇಶವಾಗಿದೆ ಎನ್ನುತ್ತಾರೆ ಇಓ ರಾಮಣ್ಣ ದೊಡ್ಡಮನಿ.

ಅರ್ಹ ಫಲಾನುಭವಿಗಳಿಗೆ ವೈಯಕ್ತಿಕ ಆಸ್ತಿಗಳನ್ನು ಸೃಜನೆ ಮಾಡುವ ಮೂಲಕ ಪರ್ಯಾಯ ಉದ್ಯೋಗ ಅವಕಾಶಗಳನ್ನು ಸೃಷ್ಟಿಸುವುದು, ಅಂಗವಿಕಲರು, ಮಹಿಳೆಯರು, ಹಿರಿಯ ನಾಗರಿಕರು, ಮಂಗಳ ಮುಖಿಯರು ಸೇರಿದಂತೆ ದುರ್ಬಲ ವರ್ಗಗಳಿಗೆ ಆದ್ಯತೆಯ ಮೇರೆಗೆ ಜಾಬ್ ಕಾರ್ಡ್ ಮತ್ತು ಕೆಲಸ ಒದಗಿಸುವುದು ಸಹ ಅಭಿಯಾನದ ಭಾಗವಾಗಿದೆ ಎಂದು ತಿಳಿಸಿದ್ದರೆ.

### ಉದ್ಯೋಗ ಚೀಟಿ ಪಡೆಯುವ ವಿಧಾನ

ಉದ್ಯೋಗ ಚೀಟಿಗಾಗಿ 18 ವರ್ಷ ಮೇಲ್ಪಟ್ಟ ಕುಟುಂಬದ ಸದಸ್ಯರು ಗ್ರಾಮ ಪಂಚಾಯಿತಿಗೆ ನಮೂನೆ-1ರಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿಯ ಜೊತೆಗೆ ಪಾಸ್ ಪೋರ್ಟ್ ಅಳತೆಯ ಫೋಟೊ, ಆಧಾರ್ ಕಾರ್ಡ್, ರೇಷನ್ ಕಾರ್ಡ್, ಬ್ಯಾಂಕ್ ಖಾತೆಯ ಮಾಹಿತಿಯನ್ನು ನೀಡಬೇಕು ಎಂದು ರಾಮಣ್ಣ ದೊಡ್ಡಮನಿ ತಿಳಿಸಿದ್ದಾರೆ.

ಗ್ರಾಮೀಣ ಪ್ರದೇಶದಲ್ಲಿ ದುಡಿಯುವ ಪುರುಷ ಮತ್ತು ಮಹಿಳೆಯರಿಗೆ ಕೂಲಿ ದರದಲ್ಲಿ ವ್ಯತ್ಯಾಸ ಇರುವುದನ್ನು ಕಾಣಬಹುದು ಮತ್ತು ಕೆಲಸದ ಸಮಯ ಕೂಡ ಅಧಿಕವಾಗಿರುತ್ತದೆ.

ನರೇಗಾ ಯೋಜನೆಯಡಿ ಪುರುಷ ಮತ್ತು ಮಹಿಳೆಯವರಿಗೆ ಸಮಾನ ಕೂಲಿ ಹಾಗೂ ನಿಗದಿತ ಕೆಲಸದ ಪ್ರಮಾಣ ಇರುತ್ತದೆ.

ಈ ಅಂಶಗಳನ್ನು ಗ್ರಾಮೀಣ ಜನರಿಗೆ ಮುಖ್ಯವಾಗಿ ಮಹಿಳೆಯರಿಗೆ ಮನವರಿಕೆ ಮಾಡುವ ಮೂಲಕ ನರೇಗಾ ಯೋಜನೆಯಲ್ಲಿ ಪಾಲ್ಗೊಳ್ಳಲು ಉತ್ತೇಜಿಸಲಾಗುವುದು.

ಸ್ವ-ಸಹಾಯ ಸಂಘದ ಮಹಿಳಾ ಸದಸ್ಯರನ್ನು ಒಳಗೊಂಡು ಕಾಯಕ ಸಂಘಗಳನ್ನು ರಚನೆ ಮಾಡುವುದು ಮತ್ತು ಮಹಿಳಾ ಕಾಯಕ ಬಂಧುಗಳನ್ನು ನೇಮಿಸಿಕೊಂಡು 2025-26ನೇ ಸಾಲಿನಲ್ಲಿ ತಾಲೂಕಿನಲ್ಲಿ ಮಹಿಳಾ ಭಾಗವಹಿಸುವಿಕೆ ಪ್ರಮಾಣದಲ್ಲಿ ಶೇ 60ರಷ್ಟು ಪ್ರಗತಿ ಸಾಧಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದ್ದಾರೆ.

## ಶಿವಾನುಭವ ಕಾರ್ಯಕ್ರಮ ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಬಸವಕೇಂದ್ರ ಹಾಗೂ ಜಾಗತಿಕ ಲಿಂಗಾಯತ ಮಹಾಸಭಾದ ಸಂಯುಕ್ತ ಆಶ್ರಯದಲ್ಲಿ ಶಿವಾನುಭವ ಕಾರ್ಯಕ್ರಮವನ್ನು ಮೇ 4ರ ಸಾಯಂಕಾಲ 6.30 ಗಂಟೆಗೆ ಒಕ್ಕಲಗೇರಿ ಚಿಲ್ಲಾಳೇಶ್ವರ ಮಠದಲ್ಲಿ ಆಯೋಜಿಸಲಾಗಿದೆ. ಶಿವಾನುಭವ ಕಾರ್ಯಕ್ರಮದಲ್ಲಿ 12ನೇ ಶತಮಾನದ ಶರಣರಾದ ಮಡಿವಾಳ ಮಾಚಿದೇವ ದೇವರ ಜಯಂತಿಯನ್ನು ಆಚರಿಸಲಾಗುತ್ತದೆ. ಮಡಿವಾಳ ಮಾಚಿದೇವರ ಕುರಿತು ಉಪನ್ಯಾಸಕರಾದ ಶರಣೆ ಗಿರಿಜಕ್ಕ ಹಸಬಿ ಉಪನ್ಯಾಸ ನೀಡುವರು. ಅಧ್ಯಕ್ಷತೆಯನ್ನು ಲೆಕ್ಕ ಪರಿಶೋಧಕರಾದ ಕೆ.ಎಸ್. ಚೆಟ್ಟಿ ವಹಿಸುವರು. ಕಾರಣ ಎಲ್ಲಾ ಸದಸ್ಯರು ಆಗಮಿಸುವಂತೆ ಕಾರ್ಯದರ್ಶಿ ಶೇಖಣ್ಣ ಕವಳಿಕಾಯಿ ಹಾಗೂ ಸಂಚಾಲಕರಾದ ಶರಣ ಕಿರಣ ತಿಪ್ಪಣ್ಣನವರ ವಿನಂತಿಸಿದ್ದಾರೆ.

## ಎಲ್.ಆಯ್. ದಿಂಡೂರ ಆಂಗ್ಲ ಮಾಧ್ಯಮ ಶಾಲೆಯ ಎಸ್ಎಸ್ಎಲ್‌ಸಿ ಫಲಿತಾಂಶ ಶೇ.100

**■ವಿಜಯಸಾಕ್ಷಿ ಸುದ್ದಿ, ರೋಣ**

ಪಟ್ಟಣದ ಎಲ್.ಐ. ದಿಂಡೂರ ಆಂಗ್ಲ ಮಾಧ್ಯಮ ಶಾಲೆಯು ಶೇ.100 ಫಲಿತಾಂಶವನ್ನು ಗಳಿಸಿದೆ. ಶಾಲೆಯ 12 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್‌ನಲ್ಲಿ, 34 ಪ್ರಥಮ ಶ್ರೇಣಿಯಲ್ಲಿ ಹಾಗೂ 2 ವಿದ್ಯಾರ್ಥಿಗಳು ದ್ವಿತೀಯ ಶೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ.

ಶಾಲೆಗೆ ಕಾವ್ಯಾ ಪುರದ 613 ಅಂಕಗಳೊಂದಿಗೆ (ಶೇ.98.8) ಪ್ರಥಮ ಸ್ಥಾನ, ಜಮೀಲಾಬೇಗಮ್ ಮುಲ್ಲಾ 602 (ಶೇ. 96.32) ಅಂಕಗಳೊಂದಿಗೆ ದ್ವಿತೀಯ ಸ್ಥಾನ,



ಶ್ರೇಯಾ ಪಟ್ಟಣಶೆಟ್ಟಿ 601 (ಶೇ. 96.16) ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ.

ಸಾಧಕ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷರಾದ ಶಶಿಧರ ಎಲ್.ದಿಂಡೂರ, ಶಾಲೆಯ ಆಡಳಿತ ಮಂಡಳಿ ಸದಸ್ಯರು ಶುಭ ಹಾರೈಸಿದ್ದಾರೆ.

## ಉಚಿತ ಬೇಸಿಗೆ ಶಿಬಿರ

**■ವಿಜಯಸಾಕ್ಷಿ ಸುದ್ದಿ, ಗದಗ**

2025-26ನೇ ಸಾಲಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಉಚಿತ ಬೇಸಿಗೆ ಶಿಬಿರವನ್ನು ಏರ್ಪಡಿಸುತ್ತಿದ್ದು, ಶಿಬಿರದ ಚಟುವಟಿಕೆಗಳಾದ ಚಿತ್ರಕಲೆ, ಕರಕುಶಲ ಕಲೆ, ಸಮೂಹ ನೃತ್ಯ, ಸಮೂಹ ಸಂಗೀತ, ಕರಾಟೆ, ಯೋಗ, ಜ್ಯೂವೇಲರಿ ಮೇಕಿಂಗ್ ಮತ್ತು ಮೆಹಂದಿ, ಗ್ರಾಮೀಣ ಕ್ರೀಡೆ ಇತ್ಯಾದಿ ಚಟುವಟಿಕೆಗಳೊಂದಿಗೆ ಸ್ಥಳೀಯ ಚಟುವಟಿಕೆಗಳನ್ನೂ ಹಮ್ಮಿಕೊಳ್ಳಲಾಗುವುದು.

ಈ ಉಚಿತ ಬೇಸಿಗೆ ಶಿಬಿರವು ಮೇ 6ರಿಂದ ಒಟ್ಟು 15 ದಿನಗಳವರೆಗೆ ಭಾನುವಾರ ಹೊರತುಪಡಿಸಿ ಬೆಳಗ್ಗೆ 9 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಜರುಗುವುದು. ಶಿಬಿರದಲ್ಲಿ ಪಾಲ್ಗೊಳ್ಳಲು 5ರಿಂದ 16 ವರ್ಷದೊಳಗಿನ





ಮಕ್ಕಳಿಗೆ ಅವಾಶವಿದ್ದು, ಸರಕಾರಿ ಶಾಲಾ ಮಕ್ಕಳು, ವಿಕಲಚೇತನ ಮಕ್ಕಳು ಹಾಗೂ ಕೊಳಚೆ ಪ್ರದೇಶದ ಮಕ್ಕಳು, ಆರ್ಥಿಕವಾಗಿ ಹಿಂದುಳಿದ ಮಕ್ಕಳಿಗೆ ಮೊದಲ ಆದ್ಯತೆಯಿದೆ. ಶಿಬಿರದ ಅವಧಿಯಲ್ಲಿ ಮಕ್ಕಳಿಗೆ ವಿವಿಧ ಸ್ಪರ್ಧೆ ಹಾಗೂ ಉಪನ್ಯಾಸ ಹಮ್ಮಿಕೊಳ್ಳಲಾಗುವುದು. ಶಿಬಿರದಲ್ಲಿ ಮೊದಲು ನೋಂದಾಯಿಸಿದ 60 ಮಕ್ಕಳಿಗೆ ಮಾತ್ರ ಅವಕಾಶವಿರುವುದು.

ಅರ್ಜಿ ಸಲ್ಲಿಸಲು ಮೇ. 5 ಅಂತಿಮ ದಿನವಾಗಿದ್ದು, ನಿಗದಿತ ದಿನಾಂಕದೊಳಗಾಗಿ ಅರ್ಜಿ ನಮೂನೆಯೊಂದಿಗೆ ಆಧಾರ್ ಕಾರ್ಡ್ ಝುರಾಕ್ಸ್ ಪ್ರತಿ ಮತ್ತು ಫೋಟೋವನ್ನು ಲಗತ್ತಿಸಿ ಸಲ್ಲಿಸುವುದು. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಉಪನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಕಟಣೆ ತಿಳಿಸಿದೆ.

**ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ;** ಉಪನಿದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಠಡಿ ಸಂಖ್ಯೆ-6, ಜಿಲ್ಲಾ ಆಡಳಿತ ಭವನ ದೂರವಾಣಿ ಸಂಖ್ಯೆ-08372-220711, ರವಿ ಎಫ್.ಉಮಚಗಿ-9916152347 ಇವರನ್ನು ಸಂಪರ್ಕಿಸಲು ಕೋರಿದೆ.

## ನಾಳೆ ಬಸವಣ್ಣನವರ ಕುರಿತು ಉಪನ್ಯಾಸ



**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಮೇ. 4ರ ಮುಂಜಾನೆ 10 ಗಂಟೆಗೆ ನಡೆಯಲಿರುವ ಬಸವದಳದ 1644ನೇ ಶರಣ ಸಂಗಮದಲ್ಲಿ ಬಸವಾದಿ ಶರಣರ ವೇಷ-ಭೂಷಣ ಸ್ಪರ್ಧೆ ಹಾಗೂ ಕರ್ನಾಟಕದ ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವಣ್ಣನವರ 920ನೇ ಜಯಂತಿ ಅಂಗವಾಗಿ ಉಪನ್ಯಾಸ ಕಾರ್ಯಕ್ರಮ ನೆರವೇರಲಿದೆ.

ಅಧ್ಯಕ್ಷತೆಯನ್ನು ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ಅಶೋಕ ಬ.ಬರಗುಂಡಿ ಉಪನ್ಯಾಸ ನೀಡುವರು. ನಗರಸಭೆ ಸದಸ್ಯೆ, ಶರಣೆ ವಿದ್ಯಾವತಿ ಅಮರನಾಥ ಗಡಗಿ ಪಾಲ್ಗೊಳ್ಳುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### ಪ.ಜಾತಿಗಳ ಉಪವರ್ಗೀಕರಣ ರಾಜ್ಯ ಸಮೀಕ್ಷೆಯನ್ನು ಮಾಡದಿರಲು ರಾಜಾನಾಯ್ಕ ಆಗ್ರಹ

# ಕೇಂದ್ರದ ಜಾತಿ ಗಣತಿ ವಿಜ್ಞಾನಸಮ್ಮತ

**■ವಿಜಯಸಾಕ್ಷಿ ಸುದ್ದಿ, ಗದಗ**

ಪರಿಶಿಷ್ಟ ಜಾತಿಗಳ ಉಪವರ್ಗೀಕರಣ ಹಾಗೂ ಒಳ ಮೀಸಲಾತಿ ಸಮೀಕ್ಷೆಯ ಕುರಿತು ಜನಜಾಗೃತಿ ಮೂಡಿಸುವ ಉದ್ದೇಶದಿಂದ ಕರ್ನಾಟಕ ಬಂಜಾರಾ ಲಂಬಾಣಿ ಹಕ್ಕು ಸಂರಕ್ಷಣಾ ಸಮಿತಿಯ ವತಿಯಿಂದ ಗದಗ ನಗರದ ಪರಿವೀಕ್ಷಣಾ ಮಂದಿರದಲ್ಲಿ ಸಮಾಲೋಚನಾ ಹಾಗೂ ಜಾಗೃತಿ ಸಭೆ ಜರುಗಿತು.

ಸಭೆಯಲ್ಲಿ ಸಮಿತಿಯ ರಾಜ್ಯಾಧ್ಯಕ್ಷ ರಾಜಾನಾಯ್ಕ ಮಾತನಾಡಿ, ಕೇಂದ್ರ ಸರ್ಕಾರ ಕೈಗೊಳ್ಳುವ ಜಾತಿಗಣತಿ ವಿಜ್ಞಾನ ಸಮ್ಮತವಾಗಿದೆ. ಅದರ ಮೂಲಕವೇ ಸಮಗ್ರ ಮಾಹಿತಿ ಸಿಗಲಿದ್ದು, ಪ್ರಸ್ತುತ ರಾಜ್ಯ ಸಮೀಕ್ಷೆಯ ಅವಶ್ಯಕತೆಯಿಲ್ಲ. ಅಸ್ಪಷ್ಟ ಸಮೀಕ್ಷೆಯಲ್ಲಿ ಯಾವ



ಮಾಹಿತಿಯನ್ನು ಜನರಿಂದ ಸಂಗ್ರಹಿಸಬೇಕು ಎಂಬುದು ಸ್ಪಷ್ಟವಾಗಿಲ್ಲ. ದಾಖಲೆ ರಹಿತ ಜನವಸತಿಗಳಲ್ಲಿ ವಾಸಿಸುವ, ಅನಕ್ಷರಸ್ಥ, ಅಮಾಯಕ ಲಂಬಾಣಿ ಸಮುದಾಯದ ಬಹುಪಾಲು ಜನರು ಈ ಸಮೀಕ್ಷೆಯಲ್ಲಿ ನಿರೀಕ್ಷಿತವಾಗಿ ಭಾಗವಹಿಸಲು ಸಾಧ್ಯವಿಲ್ಲ. ಜಾತಿ ಪ್ರತ್ಯೇಕವಾಗಿ ಇರುವ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯ ಮತ್ತು ಔದ್ಯೋಗಿಕ ಅಂಶಗಳನ್ನು ಸಮೀಕ್ಷೆಯ ನಮೂನೆಯಲ್ಲಿ ಒಳಗೊಳ್ಳಬೇಕಾಗಿದ್ದು, ಲಂಬಾಣಿ ಸಮುದಾಯಕ್ಕೆ ಸಂಬಂಧಿಸಿದ ವಿಶಿಷ್ಟ ವಿವರಗಳನ್ನು ಸದ್ಯದ ಮಾದರಿಯು ಹಿಡಿದಿಲ್ಲ ಎಂದರು.

ಅನೇಕರು ಕೆಲಸಕ್ಕಾಗಿ ತಾಂಡಾಗಳಿಂದ ಹೊರಗೆ ಹೋಗಿರುವುದರಿಂದ ಸಮೀಕ್ಷೆಗೆ ನಿರ್ಧರಿಸಿದ ಮೇ 5ರಿಂದ 17ರ ಅವಧಿಯಲ್ಲಿ ಎಲ್ಲರ ಮಾಹಿತಿಯೂ ಸಂಗ್ರಹಿಸಲು ಸಾಧ್ಯವಿಲ್ಲ. ಈ ಅವಧಿಯನ್ನು ದೀಪಾವಳಿವರೆಗೆ ವಿಸ್ತರಿಸಲು ಅಥವಾ ಬೇರೆಯವರಿಗೆ ಮಾಹಿತಿ ನೀಡುವ ಅವಕಾಶ ಒದಗಿಸಲು ಸಮಿತಿಯು ಒತ್ತಾಯಿಸಿದೆ. ಇದರಿಂದ ಎಲ್ಲ ಸಮುದಾಯಗಳಿಗೂ ಅನ್ಯಾಯವಾಗುವ ಸಾಧ್ಯತೆ ಇದೆ ಎಂದು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಸರ್ಕಾರ ಕೂಡಲೇ ಪ.ಜಾತಿಗಳ ಉಪವರ್ಗೀಕರಣ ರಾಜ್ಯ ಸಮೀಕ್ಷೆಯನ್ನು ಕೈಬಿಡಬೇಕೆಂದು ಒತ್ತಾಯಿಸಿದರು.

ಸಮಿತಿಯ ರಾಜ್ಯ ಕಾರ್ಯದರ್ಶಿ ರವಿಕಾಂತ್ ಅಂಗಡಿ, ಖಜಾಂಚಿ ಗಂಗಾ ನಾಯಕ ಗೊಂದಿ, ಕಾರ್ಯಕಾರಿ ಸಮಿತಿ ಸದಸ್ಯರಾದ ರೂಪಾ ನಾಯಕ, ನಂಜ್ಯಾ ನಾಯಕ, ಪಾಂಡು ಚವ್ಹಾಣ ಮುಂತಾದವರಿದ್ದರು.

## ವಕೀಲರ ಸಂಘದ ಪದಾಧಿಕಾರಿಗಳಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಕೀಲರ ಸಂಘದ ನೂತನ ಅಧ್ಯಕ್ಷರಾದ ಆರ್.ಜಿ. ಕಲ್ಲೂರ ಹಾಗೂ ಪದಾಧಿಕಾರಿಗಳಿಗೆ ಗದಗ ನಗರದಲ್ಲಿರುವ ಸಿದ್ಧಶ್ರೀ ಸೊಸೈಟಿಯ ವತಿಯಿಂದ ಸನ್ಮಾನಿಸಲಾಯಿತು.

ಸಿದ್ಧಶ್ರೀ ಸೊಸೈಟಿಯ ಅಧ್ಯಕ್ಷರಾದ ಕೆ.ಎಸ್. ಜಂಗಳಿಯವರು ಪದಾಧಿಕಾರಿಗಳನ್ನು ಅಭಿನಂದಿಸಿ ಮಾತನಾಡಿ, ಸಾಮಾಜಿಕ ನ್ಯಾಯ ಹಾಗೂ ಸಮ ಸಮಾಜ ನಿರ್ಮಾಣ ಮಾಡುವಲ್ಲಿ ಎಲ್ಲಾ ಪದಾಧಿಕಾರಿಗಳು ಸತ್ಯ, ನಿಷ್ಠೆ, ಕಾಯಕದಲ್ಲಿ ನಿರತರಾಗಿ ಬಡವರ ಸೇವೆ ಮಾಡಲು ಸಿಕ್ಕ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತಾಗಲಿ ಎಂದರು.

ವಕೀಲರ ಸಂಘದ ಉಪಾಧ್ಯಕ್ಷ ಎಮ್.ಎ. ಸಂಗನಾಳ, ಕಾರ್ಯದರ್ಶಿ ಎಮ್.ಎ. ನಾಯ್ಕರ, ಖಜಾಂಚಿ ಶೈಲಾ ಹಿರೇಮಠ ಹಾಗೂ ಜಂಟಿ ಕಾರ್ಯದರ್ಶಿ ಸಿ.ಎನ್. ಗೂಳರಡ್ಡಿಯವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಿದ್ಧಶ್ರೀ ಸೊಸೈಟಿಯ ಉಪಾಧ್ಯಕ್ಷ ಜೆ.ಎಸ್. ಗುಡಗೇರಿ, ನಿರ್ದೇಶಕರಾದ ಪಿ.ವಿ. ಮರಗಿ, ಎಸ್.ಟಿ. ಸತ್ಯಪ್ಪನವರ, ಗುರು ತಿರ್ಲಾಪೂರ, ಪಿ.ಎನ್. ಗುಗ್ಗರಿ, ಎನ್.ವಾಯ್. ಸಾಲಿ, ಕೆ.ಎನ್. ಪಾಟೀಲ, ಗಂಗಾಧರ ಉಳ್ಳಿಕಾಶಿ. ಬಿ.ಡಿ. ಹೂವಣ್ಣವರ, ಎಸ್.ಬಿ. ಪಾಟೀಲ, ವಿ.ಈ. ಅರಮನಿ, ಎಸ್.ಎಸ್. ಗುಡಗೇರಿ ಹಾಗೂ ಸಿಬ್ಬಂದಿಯವರು ಪದಾಧಿಕಾರಿಗಳಿಗೆ ಶುಭ ಹಾರೈಸಿದರು.

## ಚನ್ನಮ್ಮ ಪ್ರೌಢಶಾಲೆಗೆ ಉತ್ತಮ ಫಲಿತಾಂಶ

**■ವಿಜಯಸಾಕ್ಷಿ ಸುದ್ದಿ, ರೋಣ**

ಪಟ್ಟಣದ ರಾಜೀವಗಾಂಧಿ ಶಿಕ್ಷಣ ಸಂಸ್ಥೆಯ ವೀರರಾಣಿ ಚನ್ನಮ್ಮ ಬಾಲಕಿಯರ ಪ್ರೌಢಶಾಲೆಯು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ ಗಳಿಸಿದ್ದು ಪರೀಕ್ಷೆಗೆ ಹಾಜರಾದ ಎಲ್ಲ 65 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಕಾವ್ಯಾ ಬಾಬಜಿ ಶೇ. 96.80 ಅಂಕ ಗಳಿಸಿ ಪ್ರಥಮ ಸ್ಥಾನ ಪಡೆದಿದ್ದು, ಪ್ರಿಯಾಂಕಾ ಪಾಗದ ಶೇ. 95.68 ಅಂಕ ಪಡೆದು ದ್ವಿತೀಯ ಸ್ಥಾನ



ಹಾಗೂ ಲಲಿತಾ ಕದಂ ಶೇ. 95.52 ಅಂಕ ಗಳಿಸಿ ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ. ಸಾಧಕ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷರಾದ ಜಿ.ಎಸ್. ಪಾಟೀಲ, ಆಡಳಿತಮಂಡಳಿ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ.

## ಶ್ರೀ ಅನ್ನದಾನ ವಿಜಯ ಪ್ರೌಢಶಾಲೆಗೆ ಶೇ. 62.5 ಫಲಿತಾಂಶ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಅಬ್ಬಿಗೇರಿಯ ಶ್ರೀ ಅನ್ನದಾನ ವಿಜಯ ಪ್ರೌಢಶಾಲೆಯ ಎಸ್.ಎಸ್.ಎಲ್.ಸಿ. ಫಲಿತಾಂಶವು ಶೇ. 62.5ರಷ್ಟಾಗಿದೆ ಎಂದು ಮುಖ್ಯ ಶಿಕ್ಷಕ ಎಂ.ವಿ. ವೀರಾಪೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಶಸ್ತಿ ಸಹಿತ ಅತ್ಯುನ್ನತ ಶ್ರೇಣಿಯಲ್ಲಿ 7 ವಿದ್ಯಾರ್ಥಿಗಳು, ಪ್ರಥಮ ಶ್ರೇಣಿಯಲ್ಲಿ 25 ವಿದ್ಯಾರ್ಥಿಗಳು, ದ್ವಿತೀಯ ಶ್ರೇಣಿಯಲ್ಲಿ 5 ವಿದ್ಯಾರ್ಥಿಗಳು, 3 ವಿದ್ಯಾರ್ಥಿಗಳು ಪಾಸ್ ಶ್ರೇಣಿಯಲ್ಲಿ



ಉತ್ತೀರ್ಣರಾಗಿರುತ್ತಾರೆ.

ಶಾಲೆಗೆ ಪ್ರಥಮ ಸ್ಥಾನವನ್ನು ಸೌಮ್ಯ ಬಸವರಡ್ಡೇರ



(625/584) ಶೇ. 93.44, ದ್ವಿತೀಯ ಸ್ಥಾನವನ್ನು ಸಂಜನಾ ನೀರಲೋಟಿ (625/573) ಶೇ.



91.68. ತೃತೀಯ ಸ್ಥಾನವನ್ನು ಸಿಂಚನಾ ವೀರಾಪೂರ (625/571) ಶೇ. 91.36,



ವೀಣಾ ಒಂಟೇಲಿ (625/562) ಶೇ. 90 ಅಂಕಗಳನ್ನು ಪಡೆದುಕೊಂಡಿದ್ದಾರೆ.

# ನಾಳೆ ಭಗೀರಥ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ವತಿಯಿಂದ ಮಹರ್ಷಿ ಶ್ರೀ ಭಗೀರಥ ಜಯಂತಿ–2025 ಕಾರ್ಯಕ್ರಮವನ್ನು ಮೇ 4 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು. ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಸ್ವಾಗತ ಕೋರಿದ್ದಾರೆ.

### ರವಿ ಗುಂಜೀಕರ ನಿವೃತ್ತಿ ಅಂಗವಾಗಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರದಲ್ಲಿ ಡಾ.ಎಸ್.ಎಸ್. ನೀಲಗುಂದ

# ಗುಂಜೀಕರರ ಸಾಮಾಜಿಕ ಪ್ರಜ್ಞೆ ಅನುಕರಣೀಯ

■ ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾನ್ಯವಾಗಿ ನಿವೃತ್ತಿಯ ನಂತರ ಸರ್ಕಾರಿ ಅಧಿಕಾರಿಗಳು ಖಾಸಗಿಯಾಗಿ ವಿಶ್ರಾಂತ ಜೀವನ ಕಳೆಯಲು ಹಾತೊರೆಯುತ್ತಿರುತ್ತಾರೆ. ಆದರೆ, ರವಿ ಎಲ್.ಗುಂಜೀಕರ ಅವರು ತಮ್ಮ ನಿವೃತ್ತಿಯ ಅಂಗವಾಗಿ ರಕ್ತದಾನ ಸೇರಿದಂತೆ ಹಲವು ಸಮಾಜಮುಖಿ ಕಾರ್ಯಗಳನ್ನು ಹಮ್ಮಿಕೊಂಡಿದ್ದು, ಶ್ರೀಯುತರ ಸಾಮಾಜಿಕ ಪ್ರಜ್ಞೆ ಅನುಕರಣೀಯ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮೆಚ್ಚುಗೆ ವ್ಯಕ್ತಪಡಿಸಿದರು.




ಅವರು ಶುಕ್ರವಾರ ನಗರದ ಸರ್ಕಾರಿ ನೌಕರರ ಭವನದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿಗಳು ಹಾಗೂ ಸರ್ಕಾರಿ ನೌಕರರ ಸಂಘದ ನಿಕಟಪೂರ್ವ ಜಿಲ್ಲಾಧ್ಯಕ್ಷರಾದ ರವಿ ಗುಂಜೀಕರ ಅವರ ನಿವೃತ್ತಿ ಅಂಗವಾಗಿ ಅಂಬಿಕಾ ಲ್ಯಾಬ್ ಸೆಂಟರ್ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ರಕ್ತದಾನ ಶಿಬಿರದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡುತ್ತಿದ್ದರು.

ರಕ್ತದಾನ ಶ್ರೇಷ್ಠ ದಾನವಾಗಿದ್ದು, ತುರ್ತು ಪರಿಸ್ಥಿತಿಯಲ್ಲಿ ಜೀವರಕ್ಷಕ ಸಂಪತ್ತಾಗಿದೆ. ರಕ್ತದಾನ ಶಿಬಿರದ ಜೊತೆಗೆ ರೋಗಿಗಳಿಗೆ ಆಹಾರ ವಿತರಿಸುವ ಕಾರ್ಯವನ್ನೂ ರವಿ ಗುಂಜೀಕರ ಅವರ ಅಭಿಮಾನಿ ಬಳಗ ಹಮ್ಮಿಕೊಂಡಿದ್ದು, ಭವಿಷ್ಯದಲ್ಲಿ ಇಂಥ ಅನೇಕ ಸಾಮಾಜಿಕ ಕಳಕಳಿಯ ಕಾರ್ಯಗಳನ್ನು ಮಾಡಲು ರವಿ ಗುಂಜೀಕರ ಅವರಿಗೆ ದೇವರು ಶಕ್ತಿ ನೀಡಲಿ ಎಂದು ಹಾರೈಸಿದರು.

ವೈದ್ಯಾಧಿಕಾರಿಗಳಾದ ಡಾ. ವೀರೇಶ ಹಂಚಿನಾಳ ಮಾತನಾಡಿ, ಈ ದಿನಗಳಲ್ಲಿ ಒಂದು ಸಾರ್ವಜನಿಕ ಕಾರ್ಯಕ್ರಮ ಹಮ್ಮಿಕೊಳ್ಳುವುದು ಸವಾಲಿನ ಸಂಗತಿ. ಹಾಗಿರುವಾಗ, ರವಿ ಗುಂಜೀಕರ ಅವರು ಸಾರ್ವಜನಿಕ ಕಾರ್ಯಕ್ರಮಗಳ ಸರಣಿಯನ್ನೇ ಆಯೋಜಿಸಿರುವುದು ಅಭಿನಂದನೀಯ. ರಕ್ತದಾನದ ಕುರಿತು ಜನರಲ್ಲಿ ಪೂರ್ವಾಗ್ರಹಗಳಿದ್ದು, ಅವುಗಳಿಂದ ಮುಕ್ತರಾಗಿ ರಕ್ತದಾನ ಮಾಡುವ ಮೂಲಕ ಪ್ರಾಣರಕ್ಷಣೆ ಮಾಡಬೇಕಿದೆ ಎಂದರು.

ಡಾ. ಜಯಕುಮಾರ ಬ್ಯಾಳಿ ಹಾಗೂ ಅಂಬಿಕಾ ಲ್ಯಾಬ್ ಸೆಂಟರ್ ನಿರ್ದೇಶಕರಾದ ಡಾ.ಅನಂತ ಶಿವಪೂರ ಮಾತನಾಡಿ, ರಕ್ತದಾನದ ಮಹತ್ವ ಹಾಗೂ ಗುಂಜೀಕರ ಅವರ ಪರೋಪಕಾರಿ ಮನೋಭಾವವನ್ನು ಶ್ಲಾಘಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರವಿ ಗುಂಜೀಕರ ಮಾತನಾಡಿ, ನನ್ನ ನಿವೃತ್ತಿ ಅಂಗವಾಗಿ ಕಛೇರಿಯಿಂದ ಸಾರೋಟಿನಲ್ಲಿ ಮೆರವಣಿಗೆ ಮಾಡುತ್ತೇವೆ ಎಂದು ನನ್ನ ಆತ್ಮೀಯರು ಹಾಗೂ ಸಿಬ್ಬಂದಿಗಳು ಹೇಳಿದಾಗ ನಾನು ಅದನ್ನೆಲ್ಲ ನಿರಾಕರಿಸಿ ಇಂಥ ಸಾಮಾಜಿಕ ಸೇವಾಕಾರ್ಯಗಳನ್ನು ಹಮ್ಮಿಕೊಳ್ಳುವಂತೆ ಪ್ರೋತ್ಸಾಹಿಸಿದೆ. ರಕ್ತದಾನ ಮಹಾನ್ ಪುಣ್ಯದ ಕಾರ್ಯವಾಗಿದ್ದು, ಜೀವ ರಕ್ಷಕರಾದ ರಕ್ತದಾನಿಗಳನ್ನು ಎಷ್ಟು ಕೊಂಡಾಡಿದರೂ ಸಾಲದು ಎಂದರು.

ಸುಮಾರು 50ಕ್ಕೂ ಹೆಚ್ಚು ಜನರಿಂದ ರಕ್ತದಾನ ಜರುಗಿತು. ಈ ಸಂದರ್ಭದಲ್ಲಿ ಆರ್.ಡಿ. ಕಡ್ಲಿಕೊಪ್ಪ ಹಾಗೂ ಶಶಿಧರ ರೊಳ್ಳಿಯವರು ರವಿ ಗುಂಜೀಕರ ನಿವೃತ್ತಿ ಅಂಗವಾಗಿ ಅವರನ್ನು ಹಾಗೂ ನೂತನ ಸರ್ಕಾರಿ ನೌಕರರ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿಯವರನ್ನು ಸನ್ಮಾನಿಸಿದರು.

ಭಾರತಿ ತಂಬ್ರಳ್ಳಿ ಪ್ರಾರ್ಥಿಸಿದರು. ಸರ್ಕಾರಿ ನೌಕರರ ಸಂಘದ ಮಾಜಿ ಜಿಲ್ಲಾಧ್ಯಕ್ಷ ಪ್ರೇಮನಾಥ ಗರಗ, ರವಿ ಗುಂಜೀಕರ ಅಭಿಮಾನಿ ಸಂಘದ ಅಧ್ಯಕ್ಷ ಅರುಣಕುಮಾರ ಚವ್ಹಾಣ, ಎಸ್.ಆರ್. ಹಿರೇಮಠ, ಕೆ.ಎಫ್. ಹಳ್ಯಾಳ, ಆರ್.ಎಂ. ನಿಂಬನಾಯ್ಕರ್, ಮಂಜು ಮಾನೆ, ಶಿವಾಜಿ ಪಾವನ ಸೇರಿದಂತೆ ರವಿ ಗುಂಜೀಕರ ಅಭಿಮಾನಿಗಳು ಹಾಗೂ ವೈದ್ಯಾಧಿಕಾರಿಗಳು ಹಾಜರಿದ್ದರು.

> ತಾನು–ತನ್ನದು ಎಂಬ ಸ್ವಾರ್ಥವನ್ನು ತೊರೆದು ಇತರರ ಹಿತಕ್ಕಾಗಿ ಮಿಡಿದಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ. ನಾನು ವೃತ್ತಿಯಲ್ಲಿ ಇದ್ದಾಗಲೂ ಸಮಾಜಸೇವೆ ಮಾಡಿದ್ದೇನೆ, ನಿವೃತ್ತಿ ನಂತರವೂ ಅದು ಮುಂದುವರೆದಿದೆ. ಹಾಗಾಗಿ ಈ ಕಾರ್ಯಕ್ರಮಗಳಿಗೆ ಬೇರೆ ಅರ್ಥಕಲ್ಪಿಸುವ ಅವಶ್ಯಕತೆ ಇಲ್ಲ.
> – ರವಿ ಗುಂಜೀಕರ.
> ಸರ್ಕಾರಿ ನೌಕರರ ಸಂಘದ ನಿಕಟಪೂರ್ವ ಜಿಲ್ಲಾಧ್ಯಕ್ಷ.

# ಜಿಲ್ಲಾ ಮಟ್ಟದಲ್ಲಿ ಸ್ಥಾನ ಪಡೆದ ಲಕ್ಷ್ಮೇಶ್ವರದ ವಿದ್ಯಾರ್ಥಿಗಳು




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

2025ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಲಕ್ಷ್ಮೇಶ್ವರ ತಾಲೂಕು ಗದಗ ಜಿಲ್ಲೆಯಲ್ಲಿ ಪ್ರಥಮ ಸ್ಥಾನ ಪಡೆದಿದೆ. ಲಕ್ಷ್ಮೇಶ್ವರದ ಎಸ್‌ಟಿಪಿಎಂಬಿ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿನಿಯರಾದ ಸಂಪದಾ ಕುಲಕರ್ಣಿ ಮತ್ತು ಇದೇ ಶಾಲೆಯ ಖದೀಜಾ ಪಿ.ಸೂರಣಗಿ, ಗೊಜನೂರಿನ ಮೊರಾರ್ಜಿ ವಸತಿ ಶಾಲೆಯ ರಿಹಾನ್ ಶಿರಬಡಗಿ 625ಕ್ಕೆ 623 ಅಂಕ ಗಳಿಸಿ ರಾಜ್ಯಕ್ಕೆ 3ನೇ ಸ್ಥಾನ ಮತ್ತು ಜಿಲ್ಲೆಗೆ ಪ್ರಥಮ ಸ್ಥಾನ ಗಳಿಸಿದ್ದಾರೆ.

ಗೊಜನೂರಿನ ಮೊರಾರ್ಜಿ ವಸತಿ ಶಾಲೆಯ ಉದಯ ಕಟ್ಟೆಣ್ಣವರ, ಸ್ಫೂರ್ತಿ ಪ್ರಕಾಶ ಮಣ್ಣಮ್ಮನವರ ಮತ್ತು ಲಕ್ಷ್ಮೇಶ್ವರದ ಲಿಟಲ್ ಹಾರ್ಟ್ ಇಂಟರ್‌ನ್ಯಾಶನಲ್ ಶಾಲೆಯ ಸುಮೀತಗೌಡ ನರಸಮ್ಮನವರ, ಶಿಗ್ಲಿಯ ಎಸ್.ಎಸ್. ಕೂಡ್ಲಮಠ ಶಾಲೆಯ ಸೋಹಾ ನದಾಫ್ 625ಕ್ಕೆ 622 ಅಂಕ ಗಳಿಸಿ ಜಿಲ್ಲೆಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಲಕ್ಷ್ಮೇಶ್ವರ ಎಸ್‌ಟಿಎಂಬಿ ಶಾಲೆಯ ಜಯಂತ ಎಸ್.ನವಲಗುಂದ 621 ಅಂಕ ಗಳಿಸಿ ಜಿಲ್ಲೆಗೆ ತೃತೀಯ ಸ್ಥಾನ ಗಳಿಸಿದ್ದಾರೆ. ಈ ಎಲ್ಲ ವಿದ್ಯಾರ್ಥಿಗಳ ಸಾಧನೆಗೆ ಬಿಇಓ, ಶಿಕ್ಷಕ ವೃಂದದವರು ಹರ್ಷ ವ್ಯಕ್ತಪಡಿಸಿದ್ದಾರೆ.

# ಆ್ಯಂಗ್ಲೋ ಉರ್ದು ಬಾಲಕಿಯರ ಪ್ರೌಢಶಾಲೆಯ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆ್ಯಂಗ್ಲೋ ಉರ್ದು ಬಾಲಕಿಯರ ಪ್ರೌಢಶಾಲೆಯ 2025ರ ಸಾಲಿನ ಎಸ್.ಎಸ್.ಎಲ್.ಸಿ ಫಲಿತಾಂಶ ಶೇ. 55.22ರಷ್ಟಾಗಿದೆ. ಶಿಫಾಹರ್ಮೈನ್ ಎಸ್.ಖಲೀಫಾ, ಶೇ.92ರಷ್ಟು ಅಂಕ ಪಡೆದು ಶಾಲೆಗೆ ಪ್ರಥಮ, ತಬಸ್ಸುಮ ಎಸ್.ಅಣ್ಣಿಗೇರಿ ಶೇ 86.4ರಷ್ಟು ಅಂಕ ಪಡೆದು ದ್ವಿತೀಯ ಸ್ಥಾನ, ಆಫೀಯಾ ಬಿ.ನದಾಫ್ ಶೇ 85.6ರಷ್ಟು ಅಂಕ ಪಡೆದು ಶಾಲೆಗೆ ತೃತೀಯ ಸ್ಥಾನ ಪಡೆದಿದ್ದಾರೆ.

ಈ ವಿದ್ಯಾರ್ಥಿನಿಯರ ಸಾಧನೆಯನ್ನು ಶಿಕ್ಷಣ ಸಂಸ್ಥೆಯ ಚೇರಮನ್ ಹಾಜಿ ಜನಾಬ ಸರ್ಫರಾಜಅಹ್ಮದ ಎಸ್. ಉಮಚಗಿ, ಉಪಾಧ್ಯಕ್ಷ ಹಾಜಿ ಎ.ಎಂ. ಸೌದಾಗರ, ಕಾರ್ಯದರ್ಶಿ ಜನಾಬ ಎಂ.ಎಂ. ಶೇಖ, ಶಿಕ್ಷಣ ಸಂಸ್ಥೆಯ ಸರ್ವ ಸದಸ್ಯರು, ಮುಖ್ಯೋಪಾಧ್ಯಾಯರಾದ ಜನಾಬ ಎಲ್.ಆರ್. ಇಟಗಿ, ಶಿಕ್ಷಕ–ಶಿಕ್ಷಕಿಯರು, ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

# 'ಕನ್ನಡ, ಕನ್ನಡ ಎಂದಿದ್ದಕ್ಕೆ ಪಹ್ಲಗಾಮ್ ದಾಳಿ ಆಯ್ತು' ಎಂದ ಸೋನು ನಿಗಮ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಖ್ಯಾತ ಗಾಯಕ ಸೋನು ನಿಗಮ್ ಪಹ್ಲಗಾಮ್ ದಾಳಿಯ ಕುರಿತು ನೀಡಿರುವ ಹೇಳಿಕೆ ವಿವಾದ ಸೃಷ್ಟಿಸಿದೆ. 'ಪಹಲ್ಗಾಮ್ ದಾಳಿಯಾಗಿದ್ದು ಕನ್ನಡದಿಂದಲೇ' ಎಂಬರ್ಥ ಬರೋ ರೀತಿಯಲ್ಲಿ ಸೋನು ನಿಗಮ್ ಹೇಳಿಕೆ ನೀಡಿದ್ದಾರೆ. ಸೋನು ನಿಗಮ್ ಹೇಳಿಕೆಯಿಂದ ಕನ್ನಡ ಅಭಿಮಾನಿಗಳು ಗರಂ ಆಗಿದ್ದು ಸೋನು ನಿಗಮ್ ರನ್ನು ಕನ್ನಡ ಚಿತ್ರರಂಗದಿಂದ ಬ್ಯಾನ್ ಮಾಡಬೇಕು ಎಂಬ ಒತ್ತಾಯ ಕೇಳಿ ಬಂದಿದೆ.

ಕಾಲೇಜೊಂದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸೋನು ನಿಗಮ್ ಭಾಗವಹಿಸಿದ್ದರು. ಈ ವೇಳೆ ವಿದ್ಯಾರ್ಥಿಯೊಬ್ಬ ಕನ್ನಡ ಹಾಡು ಹೇಳುವಂತೆ ಕೇಳಿದರು. ಈ ವೇಳೆ ಪ್ರತಿಕ್ರಿಯಿಸಿದ ಸೋನು ನಿಗಂ ನಾನು ಎಲ್ಲೇ ಹೋದರೂ ಕನ್ನಡ ಹಾಡು ಹೇಳುವ ಬಗ್ಗೆ ಒತ್ತಾಯ ಕೇಳಿ ಬರುತ್ತದೆ ಎಂದು ತಾಳ್ಮೆ ಕಳೆದುಕೊಂಡ ಸೋನು ನಿಗಮ್, ತಮ್ಮ ಹಾಡನ್ನು ಅರ್ಧಕ್ಕೆ ನಿಲ್ಲಿಸಿದ್ದು, 'ಕನ್ನಡ.. ಕನ್ನಡ ಇದೇ ಕಾರಣದಿಂದ ಪಹಲ್ಗಾಮ್ ದಾಳಿಯಾಗಿದ್ದು' ಎಂದು ಹೇಳಿ ವಿವಾದ ಸೃಷ್ಟಿಸಿದ್ದಾರೆ.

### ಶಿವಾನುಭವ ಕಾರ್ಯಕ್ರಮದಲ್ಲಿ ಅಶ್ವಿನಿ ಬಳಿಗೇರ ಉಪನ್ಯಾಸ

# ಪುಸ್ತಕ ಸಂಸ್ಕೃತಿ ಬೆಳೆಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪುಸ್ತಕಗಳು ನಮ್ಮ ಸಹಾಯಕ್ಕೆ ಸದಾ ಸಿದ್ಧವಾಗಿರುತ್ತವೆ. ಅಪಾರವಾದ ಜ್ಞಾನ ಕೋಶದ ಪ್ರಾಪ್ತಿ ಪುಸ್ತಕಗಳಲ್ಲಿದೆ. ಆದ್ದರಿಂದ ಪುಸ್ತಕಗಳು ದೇವ ಮಂದಿರದ ಚಿನ್ನದ ಪಾತ್ರೆಗಳು. ಪ್ರತಿಯೊಬ್ಬರೂ ಪುಸ್ತಕ ಸಂಸ್ಕೃತಿ ಬೆಳೆಸಿಕೊಳ್ಳಬೇಕು ಎಂದು ಅಶ್ವಿನಿ ಕೆ.ಬಳಿಗೇರ ಅಭಿಪ್ರಾಯಪಟ್ಟರು.

ಲಿಂಗಾಯತ ಪ್ರಗತಿಶೀಲ ಸಂಘದ ವತಿಯಿಂದ ನಡೆದ 2743ನೇ ಶಿವಾನುಭವದಲ್ಲಿ ಉಪನ್ಯಾಸಕರಾಗಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು.




ಗ್ರಂಥಾಲಯಗಳಲ್ಲಿ ಹೋಗಿ ಕುಳಿತಾಗ ನಮ್ಮ ಮುಂದೆ ವಿಶಾಲವಾದ ಪುಸ್ತಕಗಳ ರಾಶಿಯೇ ಬೀಳುತ್ತವೆ. ಉತ್ತಮ ಪುಸ್ತಕಗಳಿಂದ ಬದುಕಿಗೆ ಬೆಳಕು, ಸಮಾಧಾನ, ಸಂತೋಷ ದೊರೆಯುತ್ತದೆ. ಸಮಸ್ಯೆಗಳಿಗೆ ಪರಿಹಾರ, ನೊಂದ ಮನಸ್ಸಿಗೆ ಸಾಂತ್ವನ ನೀಡುತ್ತವೆ. ಗಾಂಧೀಜಿ, ಕಲಾಂ, ಅಂಬೇಡ್ಕರ್ ಮುಂತಾದ ಮಹಾನ್ ವ್ಯಕ್ತಿಗಳ ಅಧ್ಯಯನದಿಂದ ಪುಸ್ತಕಗಳು ಪರಿಣಾಮ ಬೀರಿದ ಬಗ್ಗೆ ಹಾಗೂ ಬೇರೆ ದೇಶಗಳ ಪುಸ್ತಕಗಳಿಗೆ ಮಹತ್ವ ನೀಡುವ ಬಗ್ಗೆ ಮನೋಜ್ಞವಾಗಿ ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಗದಗ ಜಿಲ್ಲೆಯ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೆ.ಎ. ಬಳಿಗೇರ ವಿಶ್ವ ಪುಸ್ತಕ ದಿನದ ಮಹತ್ವವನ್ನು ತಿಳಿಸಿ, ಪುಸ್ತಕಗಳಿಗೆ ಎಂದೂ ಸಾವಿಲ್ಲ ಎಂದರು. ಪಾರ್ವತಿ ಬಳಿಗೇರ ಶಿರಹಟ್ಟಿ ಹಾಗೂ ವಿರೇಶ ಬಾದಾಮಿ ಬೆಂಗಳೂರು ಉಪಸ್ಥಿತರಿದ್ದರು.

> ಕಾರ್ಯಕ್ರಮದ ಸಮ್ಮುಖ ವಹಿಸಿಕೊಂಡ ಪರಮ ಪೂಜ್ಯ ಶ್ರೀ ಚಂದ್ರಶೇಖರ ದೇವರು ಮಾತನಾಡಿ, ಪುಸ್ತಕಗಳು ಜ್ಞಾನದ ಕೊಡಗಳು. ಕೊಡದಲ್ಲಿ ನೀರು ತುಂಬಿಕೊಂಡಂತೆ, ಪುಸ್ತಕಗಳ ಜ್ಞಾನವನ್ನು ಮನದಲ್ಲಿ ತುಂಬಿಕೊಂಡಾಗ ಬದುಕು, ಪಾವನವಾಗುತ್ತದೆ ಎಂದು ಆಶೀರ್ವಚನ ನೀಡಿದರು.

ವಚನ ಸಂಗೀತವನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ನಡೆಸಿದರು. ಧರ್ಮಗ್ರಂಥ ಪಠಣವನ್ನು ಶಿವನಾಗರಾಜ್ ಎ.ಆಸಂಗಿ, ವಚನಚಿಂತನವನ್ನು ಶಿವಾನಿ ಎ.ಆಸಂಗಿ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಪ್ರಭು ಮೆಡಿಕಲ್ಸ್‌ನ ಮಲ್ಲಪ್ಪ ದ್ಯಾಮಪ್ಪ ಕಾಬಳ್ಳಿ ವಹಿಸಿಕೊಂಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ್ ಪುರದ ಹಾಗೂ ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ ಹಾಗೂ ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ ಉಪಸ್ಥಿತರಿದ್ದರು. ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

# ಎಸ್‌ಎಸ್‌ಕೆ ಹೈಸ್ಕೂಲ್ ವಿದ್ಯಾರ್ಥಿನಿ ರಾಜ್ಯಕ್ಕೆ 4ನೇ ರ‍್ಯಾಂಕ್



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಶಿಗ್ಲಿ ಗ್ರಾಮದ ಗ್ರಾಮ ಭಾರತಿ ಶಿಕ್ಷಣ ಸಮಿತಿಯ ಎಸ್.ಎಸ್. ಕೂಡ್ಲಮಠ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶವು 100ಕ್ಕೆ 100 ಆಗಿದೆ.

ಶಾಲೆಯ ವಿದ್ಯಾರ್ಥಿಗಳಾದ ಸೋಹಾ ನದಾಫ್– ಶೇ. 99.52 ಅಂಕಗಳೊಂದಿಗೆ ರಾಜ್ಯಕ್ಕೆ 4ನೇ ರ‍್ಯಾಂಕ್ ಪಡೆದಿದ್ದಾಳೆ. ಜಯಶ್ರೀ ಕಾಕೋಳ ಶೇ. 98.88, ಸಿರಿನ್‌ಬಾನು ಮಂಜಲಾಪೂರ ಶೇ. 95.36 ಅಂಕಗಳನ್ನು ಗಳಿಸಿ ಶಾಲೆಗೆ ಪ್ರಥಮ, ದ್ವಿತಿಯ ಹಾಗೂ ತೃತಿಯ ಸ್ಥಾನಗಳನ್ನು ಪಡೆದಿದ್ದಾರೆ.

ಉಳಿದಂತೆ ವೈಷ್ಣವಿ ಪಾಟೀಲ ಶೇ. 94.88, ಶಾಂಭವಿ ಕುದರಿ ಶೇ. 94.4, ಹಿತೇಶ ತಾಂದಳೆ ಶೇ. 94.24, ನಂದಿತಾ ಕಾಳಪ್ಪನವರ 93.28, ವಿಕಾಸ ನೆಗಳೂರ ಶೇ.90.72 ಹಾಗೂ ನಿಖಿತಾ ಪಾಟೀಲ ಶೇ. 90.72 ಅಂಕಗಳನ್ನು ಗಳಿಸಿ ಶಾಲೆಗೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಚೇರಮನ್ ಎಸ್.ಪಿ. ಬಳಿಗಾರ, ವೈಸ್ ಚೇರಮನ್ ಎಚ್.ಎಸ್. ತಳವಾರ, ಗೌರವ ಕಾರ್ಯದರ್ಶಿ ಸಿ.ಎಂ. ರಾಗಿ ಹಾಗೂ ಆಡಳಿತ ಮಂಡಳಿಯ ಸರ್ವ ಸದಸ್ಯರು, ಮುಖ್ಯೋಪಾಧ್ಯಾಯರು, ಶಿಕ್ಷಕರು ಅಭಿನಂದಿಸಿದ್ದಾರೆ.

## ಇಂದು ಜನತಾಸದನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ. ಬಿ. ಅಸೂಟಿ ಅವರ ಅಧ್ಯಕ್ಷತೆಯಲ್ಲಿ ಮೇ 03 ರಂದು ಮುಂಜಾನೆ 10 ಗಂಟೆಯಿಂದ ಮಧ್ಯಾಹ್ನ 4 ಗಂಟೆಯವರೆಗೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರಿದ ಕಚೇರಿಯಲ್ಲಿ (ಎ.ಸಿ. ಕಚೇರಿ ಅವರಣದಲ್ಲಿ) "ಜನತಾ ಸದನ" ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಈ ಜನತಾ ಸದನ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಪಾಲ್ಗೊಂಡು ಸದುಪಯೋಗವನ್ನು ಪಡೆಯುವಂತೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ

ಪಾಲಾ ಬಾದಾಮಿ ರೋಡ್, ಗದಗ. ಪಿನ್‌ಕೋಡ್ ನಂ. 582101

ದೂರವಾಣಿ: 08372–278003. ಇ ಮೇಲ್: uda-gadag@hotmail.com

ಸಂ: ನಅಪ್ರಾಗಬೆ/716/2025–26/257 ದಿನಾಂಕ: 29–04–2025

### ಇ–ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ

ಆಯುಕ್ತರು, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರವು ಸನ್ 2024–25ನೇ ಸಾಲಿನ ಪ್ರಾಧಿಕಾರದ ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಆದೇಶ 1999–2000ರ ಪ್ರಕಾರ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ (KPPP) ಐಂಟಂವಾರು ಟೆಂಡರ್ ಆಹ್ವಾನಿಸಲಾಗಿದೆ. ಒಂದು ವೇಳೆ ತಾಂತ್ರಿಕ ಕಾರಣಗಳಿಂದ ಸದರಿ ಯಾವುದಾದರೂ ಬದಲಾವಣೆಯಾಗಿದ್ದಲ್ಲಿ ಸದರಿ ಬದಲಾವಣೆ ವಿವರಗಳನ್ನು ಕರ್ನಾಟಕ ಪಬ್ಲಿಕ್ ಪೋರ್ಟಲ್‌ದಲ್ಲಿ ಮಾತ್ರ ಪ್ರಕಟಿಸಲಾಗುವುದು. ಆಸಕ್ತಿಯುಳ್ಳ ಅರ್ಹ ಲೋಕೊಪಯೋಗಿ ಇಲಾಖೆಯ ನೋಂದಾಯಿತ ಗುತ್ತಿಗೆದಾರರು ಭಾಗವಹಿಸಬಹುದಾಗಿದೆ. ಆಸಕ್ತ ಗುತ್ತಿಗೆದಾರರು ಪೂರಕ ದಾಖಲೆಗಳೊಂದಿಗೆ ದಿನಾಂಕ: **27–05–2025**ರ ಸಮಯ 17.30 ಗಂಟೆಯ ಒಳಗಾಗಿ ತಮ್ಮ ಟೆಂಡರ್ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ **(www.kppp.karnataka.gov.in)** ಸಲ್ಲಿಸಬಹುದಾಗಿದೆ.

ಟೆಂಡರ್ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಆಯುಕ್ತರು ನಗರಾಭಿವೃದ್ಧಿ ಪ್ರಾಧಿಕಾರ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

**ಅನುಬಂಧ**

| ಕ್ರ.ಸಂ | ಕಾಮಗಾರಿ ವಿವರ | ಅಂದಾಜು ಮೊತ್ತ (ರೂ ಲಕ್ಷಗಳಲ್ಲಿ) |
|---|---|---|
| 1 | ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ರಾಜೀವ ಗಾಂಧಿ ನಗರದ ಉದ್ಯಾನವನ ಅಭಿವೃದ್ಧಿ ಕಾಮಗಾರಿ. | 20.00 |
| 2 | ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಡಿ.ಸಿ. ಮಿಲ್ ಉದ್ಯಾನವನ ಅಭಿವೃದ್ಧಿ ಕಾಮಗಾರಿ. | 8.00 |
| 3 | ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಗದಗ–ಬೆಟಗೇರಿ ನಗರದ ವಿವಿಧ ಭಾಗಗಳಲ್ಲಿ ಹೈಮಾಸ್ಟಗಳನ್ನು ಅಳವಡಿಸುವ ಕಾಮಗಾರಿ. | 24.00 |
| 4 | ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಗದಗ–ಬೆಟಗೇರಿ ನಗರದ ಮುಖ್ಯ ರಸ್ತೆಗಳಲ್ಲಿ ಅಲಂಕಾರಿಕ ಬೀದಿ ದೀಪಗಳನ್ನು ಅಳವಡಿಸುವ ಕಾಮಗಾರಿ. | 6.00 |
| 5 | ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ನೀಲಮ್ಮ ತಾಯಿ ಮಠದ ಹಿಂದಿನ ರಸ್ತೆ ಅಭಿವೃದ್ಧಿ ಕಾಮಗಾರಿ. | 18.00 |
| 6 | ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಹಾಲಿ ಇರುವ ಕಟ್ಟಡವನ್ನು ದುರಸ್ಥಿ ಹಾಗೂ ಬಣ್ಣ ಹಚ್ಚುವ ಕಾಮಗಾರಿ. | 3.00 |


| | | |
|---|---|---|
| 1 | ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: | 27–05–2025 ರಂದು ಮಂಗಳವಾರ ಸಾಯಂಕಾಲ 5.30 ಗಂಟೆಯವರೆಗೆ |
| 2 | ತಾಂತ್ರಿಕ ಹಾಗೂ ಆರ್ಥಿಕ ಬಿಡ್ ತೆರೆಯುವ ದಿನಾಂಕ: | 30–05–2025 ಶುಕ್ರವಾರ ಬೆಳಿಗ್ಗೆ 11.00 ಗಂಟೆಯ ನಂತರ |

**ನಿಬಂಧನೆಗಳು : 1)** ಯಾವುದೇ ಕಾರಣಕ್ಕೂ ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಂಪರ್ಕಜಾಲ (ಆನ್‌ಲೈನ್) ಸಿಗದಿದ್ದರೆ ಈ ಕಚೇರಿ ಜವಾಬ್ದಾರಿಯಾಗಿರುವುದಿಲ್ಲ. **2)** ಯಾವುದೇ ಟೆಂಡರ್ ಅಂಗೀಕರಿಸುವ ಅಥವಾ ತಿರಸ್ಕರಿಸುವ ಅಧಿಕಾರ ಅಯುಕ್ತರು, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ ಇವರು ಕಾಯ್ದಿರಿಸಿಕೊಂಡಿರುತ್ತಾರೆ ಹಾಗೂ ಇನ್ನುಳಿದ ಎಲ್ಲಾ ಷರತ್ತುಗಳು ಅನ್ವಯವಾಗುತ್ತದೆ. ಈ ಮೇಲ್ಕಂಡ ದಿನಾಂಕಗಳಂದು ಸರ್ಕಾರಿ ರಜೆ ಘೋಷಣೆಯಾದಲ್ಲಿ ಅದರ ಮುಂದಿನ ಕೆಲಸದ ದಿನಾಂಕವನ್ನು ಪರಿಗಣಿಸಲಾಗುವುದುಸುವುದು

ಸಹಿ/–(ಸಿದ್ದಪ್ಪ ಸಿ.ಬೆವೂರ)
ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ ಗದಗ–ಬೆಟಗೇರಿ.

ವಾ.ಸಾ.ಇ/ಗದಗ/43/ದೇಶಪಾಂಡೆಪಬ್ಲಿಸಿಟಿ/2025–26


# ಲಿಟಲ್ ಹಾರ್ಟ್ಸ್ ವಿದ್ಯಾರ್ಥಿಗಳ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಲಿಟಲ್ ಹಾರ್ಟ್ಸ್ ಇಂಟರ್‌ನ್ಯಾಶನಲ್ ಹೈಸ್ಕೂಲ್ ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಸಾಧಿಸಿದ್ದಾರೆ.

ಸುಮಿತಗೌಡ ನರಸಮ್ಮನವರ–ಶೇ. 99.52 ಅಂಕ ಪಡೆದು ರಾಜ್ಯಕ್ಕೆ 4ನೇ ಸ್ಥಾನ, ಜಿಲ್ಲೆಗೆ ದ್ವಿತೀಯ ಸ್ಥಾನ, ಅರ್ಪಿತಾ ಗುಂಜಳ–ಶೇ. 99.20 ಅಂಕ ಪಡೆದು ರಾಜ್ಯಕ್ಕೆ 6ನೇ ಸ್ಥಾನ ಪಡೆದುಕೊಂಡಿದ್ದಾರೆ. ನಾಗೇಶ್ವರ ಬಾಡಗಿ ಶೇ. 98.56, ಫಕ್ಕೀರಯ್ಯಾ ಹಿರೇಮಠ ಶೇ. 97.44, ಖುಷಿ ಕೊರಡೂರ ಶೇ. 92.16, ಅನುಶ್ರೀ ಗುಡ್ಡಣ್ಣವರ ಶೇ. 92, ಪ್ರಶಾಂತ ಇಮ್ಮಡಿ ಶೇ. 91.20, ಗೌರಿ ಬೆಟದೂರ ಶೇ. 90.40, ಕುಶಾಲ ಚಪ್ಪರಮನಿ ಶೇ. 89.76 ಅಂಕ ಪಡೆದುಕೊಂಡಿದ್ದಾರೆ.

ಶಾಲೆಯ ಒಟ್ಟು 54 ವಿದ್ಯಾರ್ಥಿಗಳಲ್ಲಿ 25 ಡಿಸ್ಟಿಂಕ್ಷನ್, 20 ಪ್ರಥಮ ಶ್ರೇಣಿ, 04 ದ್ವಿತೀಯ ಶ್ರೇಣಿ ಪಡೆಯುವುದರ ಮೂಲಕ ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka